ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 146 RNI Number : KNKAN/25/A2770 04-06-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :146 ರಾಯಚೂರು 04-06-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿಕೆ ಶಿವಕುಮಾರ್ ಪ್ರಮಾಣ ವಚನ ಸ್ವೀಕಾರ







ಪ್ರಮಾಣ ವಚನ ಸ್ವೀಕರಿಸುವ ಮುನ್ನ ತಾಯಿಯ ಆಶೀರ್ವಾದ ಪಡೆದ ಡಿಕೆಶಿ

ಬೆಂಗಳೂರು : ರಾಜ್ಯದ ಜನತೆ ಹಾಗೂ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಬಹು ನಿರೀಕ್ಷೆಯಂತೆ ದೊಡ್ಡ ಆಲಹಳ್ಳಿ ಕೆಂಪೇಗೌಡ ಶಿವಕುಮಾರ್ ಅವರು ಕರ್ನಾಟಕದ ನೂತನ ಮುಖ್ಯಮಂತ್ರಿಯಾಗಿ ಇಂದು ಪ್ರಮಾಣ ವಚನ ಸ್ವೀಕರಿಸಿದ್ದಾರೆ.

ಕನಕಪುರ ತಾಲೂಕು, ದೊಡ್ಡಆಲಹಳ್ಳಿ ಗ್ರಾಮದ ಕೆಂಪೇಗೌಡ ಹಾಗೂ ಗೌರಮ್ಮ ದಂಪತಿಯ ಪ್ರಥಮ ಪುತ್ರನಾಗಿ (1962ರ ಮೇ 15ರಂದು) ಜನಿಸಿದ ಡಿ.ಕೆ.ಶಿವಕುಮಾರ್ ತಮ್ಮ ತಂದೆಯಿಂದಲೇ ನಾಯಕತ್ವದ ಗುಣಗಳನ್ನು ಪಡೆದುಕೊಂಡು ಬಂದರು. 18ನೇ ವಯಸ್ಸಿನಲ್ಲಿಯೇ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಪಕ್ಷದ ವಿದ್ಯಾರ್ಥಿ ವಿಭಾಗವಾದ ಎನ್‌ಎಸ್‌ಯುಐಗೆ ಸೇರ್ಪಡೆಗೊಂಡು ಕೆಲ ಕಾಲದಲ್ಲಿಯೇ ಬೆಂಗಳೂರು ಜಿಲ್ಲೆಯ ಘಟಕದ ಅಧ್ಯಕ್ಷರೂ ಆದರು (1981-83).

ನಂತರ ವಿದ್ಯಾಭ್ಯಾಸಕ್ಕೆಂದು ಬೆಂಗಳೂರು ಸೇರಿದ ಡಿ.ಕೆ.ಶಿವಕುಮಾರ್ ಆರ್.ಸಿ. ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿದ್ದಾಗ ಯುವ ಕಾಂಗ್ರೆಸ್‌ಗೆ ಸೇರಿ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿಯಾಗಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷರಾಗಿ, ಕನಕಪುರ ತಾಲೂಕಿನ ಗ್ರಾಮೀಣ ಭಾಗಗಳಲ್ಲಿ ಉಚಿತ ವೈದ್ಯಕೀಯ ಶಿಬಿರ, ರಕ್ತದಾನ ಶಿಬಿರಗಳನ್ನು ವ್ಯವಸ್ಥೆಗೊಳಿಸಿ ಜನಮನವನ್ನು ಸೂರೆಗೊಂಡರು.

1985ರ ಸಾತನೂರು ವಿಧಾನಸಭಾ ಕ್ಷೇತ್ರದಲ್ಲಿ ಅಂದಿನ ಪ್ರಭಾವಿ ಜನತಾದಳ ಮುಖಂಡ ಎಚ್.ಡಿ.ದೇವೇಗೌಡರ ವಿರುದ್ಧ ಕಾಂಗ್ರೆಸ್ ಪಕ್ಷದಲ್ಲಿ ಉತ್ತಮ ಅಭ್ಯರ್ಥಿ ಸಿಗುವುದು ದುರ್ಲಭವಾದಾಗ ಪಕ್ಷದ ವರಿಷ್ಠರ ಕಣ್ಣು ಡಿ.ಕೆ.ಶಿವಕುಮಾರ್ ಮೇಲೆ ಬಿತ್ತು. ಹೀಗಾಗಿ ರಾಜಕಾರಣದ ಪರಿಚಯವೇ ಇಲ್ಲದಿದ್ದ ಶಿವಕುಮಾರ್ ಅವರನ್ನು ಎಚ್.ಡಿ.ದೇವೇಗೌಡ ಅವರ ವಿರುದ್ಧ ಸ್ಪರ್ಧಿಸಲು ಪಕ್ಷದ ಅಭ್ಯರ್ಥಿಯನ್ನಾಗಿ ನಿಲ್ಲಿಸಲಾಯಿತು. ಸಾಕಷ್ಟು ಪ್ರಬಲ ಪ್ರತಿರೋಧ ತೋರಿದ ಡಿ.ಕೆ.ಶಿವಕುಮಾರ್ ಚುನಾವಣೆಯಲ್ಲಿ ದೇವೇಗೌಡರು ಅತ್ಯಂತ ಪ್ರಯಾಸದ ಜಯ ಪಡೆಯುವಂತೆ ಮಾಡುವಲ್ಲಿ ಯಶಸ್ವಿಯಾದರು.

ವಿಧಾನಸಭಾ ಚುನಾವಣೆಯಾದ ಕೆಲವೇ ದಿನಗಳಲ್ಲಿ 1987ರಲ್ಲಿ ಅವರು ಸಾತನೂರು ಕ್ಷೇತ್ರದಿಂದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿಗೆ ಸದಸ್ಯರಾಗಿ ಆಯ್ಕೆಗೊಂಡರು. 1989ರಲ್ಲಿ ಅಖಿಲ ಭಾರತೀಯ ಕಾಂಗ್ರೆಸ್ ಪಕ್ಷದ ಮುಖೇನ ಸಾತನೂರು ಕ್ಷೇತ್ರದಿಂದ ಸ್ಪರ್ಧಿಯನ್ನಾಗಿ ನಿಲ್ಲಿಸಲಾಯಿತು. ಈ ಚುನಾವಣೆಯಲ್ಲಿ ಡಿ.ಕೆ.ಶಿವಕುಮಾರ್ ಅತ್ಯಧಿಕ ಮತಗಳಿಂದ ಜಯಗಳಿಸಿದರು.

1991ರಲ್ಲಿ ಅಂದಿನ ಮುಖ್ಯಮಂತ್ರಿ ವೀರೇಂದ್ರ ಪಾಟೀಲ್ ಅವರು ಅನಾರೋಗ್ಯದ ಕಾರಣ ಸಿಎಂ ಪದವಿ ತ್ಯಜಿಸಬೇಕಾಗಿ ಬಂದಾಗ ಅವರ ಉತ್ತರಾಧಿಕಾರಿಯನ್ನಾಗಿ ಎಸ್.ಬಂಗಾರಪ್ಪ ಸರ್ವಾನುಮತದಿಂದ ಆಯ್ಕೆಯಾಗುವಂತೆ ಮಾಡುವಲ್ಲಿ ಡಿ.ಕೆ.ಶಿವಕುಮಾರ್ ಪ್ರಮುಖ ಪಾತ್ರ ವಹಿಸಿದ್ದರು. ಇದಕ್ಕೆ ಬಹುಮಾನದ್ಯೋತಕವಾಗಿ ಬಂಗಾರಪ್ಪನವರು ಈ ಯುವಕನನ್ನು ಸಚಿವರನ್ನಾಗಿ ಮಾಡಿ ಬಂಧಿಖಾನೆ ಖಾತೆ ನೀಡಿದರು.

ಆದರೂ ಕೆಲ ರಾಜಕೀಯ ಕಾರಣಗಳಿಂದ ಅವರಿಗೆ 1994ರಲ್ಲಿ ಪಕ್ಷದ ಟಿಕೆಟ್ ವಿರೋಧಿಸಲಾಯಿತು, ಧೃತಿಗೆಡದೆ ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ಬಂಡಾಯ ಅಭ್ಯರ್ಥಿಯಾಗಿ ಜಯಗಳಿಸಿ ಜಯದ ಪರಂಪರೆ ಮುಂದುವರೆಸಿದರು. 2004ರಲ್ಲಿ ಡಿ.ಕೆ. ಶಿವಕುಮಾರ್ ಸಾತನೂರು ಕ್ಷೇತ್ರದಿಂದ 4ನೇ ಭಾರಿ ಆರಿಸಿ ಬಂದರೂ ಕಾಂಗ್ರೆಸ್ ಪಕ್ಷ ಬಹುಮತಗಳಿಸುವಲ್ಲಿ ವಿಫಲವಾಯಿತು. ಬಳಿಕ ಜೆಡಿಎಸ್ ಜೊತೆಗೂಡಿ ಕಾಂಗ್ರೆಸ್ ಸಮ್ಮಿಶ್ರ ಸರಕಾರ ರಚನೆಯಾಯಿತು. ಹೀಗೆ ರಾಜ್ಯದಲ್ಲಿ ಪ್ರಥಮ ಬಾರಿಗೆ ಉದಯಿಸಿದ ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರಕಾರದಲ್ಲಿ ಡಿ.ಕೆ.ಶಿವಕುಮಾರ್ಗೆ ಸ್ಥಾನವಿರಲಿಲ್ಲ.

ಟ್ರಬಲ್ ಶೂಟರ್: ನೆರೆಯ ಮಹಾರಾಷ್ಟ್ರದಲ್ಲಿ ವಿಲಾಸ್‌ರಾವ್ ದೇಶ್‌ಮುಖ್ ಸಮ್ಮಿಶ್ರ ಸರಕಾರ ಎನ್‌ಸಿಪಿ ಪಕ್ಷದೊಂದಿಗೆ ಸೆಣಸಾಟಕ್ಕಿಳಿದಾಗ ಸರಕಾರ ಅಲ್ಪಮತದ ಅಪಾಯಕ್ಕೆ ಸಿಕ್ಕಿಕೊಂಡಿತ್ತು. ಆಗ ಕುದುರೆ ವ್ಯಾಪಾರದ ಅಪಾಯ ಎದುರಾಗಿತ್ತು. ತಕ್ಷಣ ಕಾಂಗ್ರೆಸ್ ಹೈಕಮಾಂಡಿನ ಆದೇಶದಂತೆ ಕಾರ್ಯಪ್ರವೃತ್ತರಾದ ಶಿವಕುಮಾರ್ ಮಹಾರಾಷ್ಟ್ರ ಕಾಂಗ್ರೆಸ್ ಶಾಸಕರನ್ನು ಮುಂಬೈಯಿಂದ ಬೆಂಗಳೂರಿಗೆ ಕರೆದುಕೊಂಡು ಬಂದು 10-12 ದಿನಗಳ ಕಾಲ ಬೆಂಗಳೂರಿನ ರೆಸಾರ್ಟ್‌ವೊಂದರಲ್ಲಿ ಇರಿಸಿಕೊಂಡು ರಕ್ಷಣೆ ನೀಡಿದರು. ಮುಂಬೈಯಲ್ಲಿ ಪರಿಸ್ಥಿತಿ ತಿಳಿಯಾಗಿ ಸರಕಾರಕ್ಕೆ ಅಪಾಯವಿಲ್ಲವೆಂಬ ಸಂಗತಿ ಮನವರಿಕೆಯಾದ ನಂತರವಷ್ಟೇ ಮಹಾರಾಷ್ಟ್ರ ಶಾಸಕರನ್ನು ಕ್ಷೇಮವಾಗಿ ಕಳುಹಿಸಲಾಯಿತು.

ಹೀಗೆ ಡಿ.ಕೆ.ಶಿವಕುಮಾರ್ ಸಕಾಲಿಕ ರಾಜಕೀಯ ತಂತ್ರಗಾರಿಕೆ ಫಲಕೊಟ್ಟು ಮಹಾರಾಷ್ಟ್ರದಲ್ಲಿ ಸಿಎಂ ವಿಲಾಸ್‌ರಾವ್ ದೇಶ್‌ಮುಖ್ ಸರಕಾರ ಅಪಾಯ ಎದುರಿಸದೆ ಪಾರಾಗಿ ಮುಂದುವರೆಯುವಂತಾಯಿತು.

1999ರಲ್ಲಿ ಎಸ್.ಎಂ.ಕೃಷ್ಣ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಆಯ್ಕೆಗೊಂಡಾಗ ಡಿ.ಕೆ.ಶಿವಕುಮಾರ್ ಅವರ ಹಿಂದೆ ಬೆನ್ನೆಲುಬಾಗಿ ನಿಂತು ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ರೀತಿಯಲ್ಲಿ ಜಯಗಳಿಸಿ ಸರಕಾರ ರಚಿಸುವಲ್ಲಿ ಕಾರಣೀಭೂತರಾದರು. ಎಸ್.ಎಂ.ಕೃಷ್ಣ ಚುನಾವಣಾ ಪೂರ್ವದಲ್ಲಿ ಪಾಂಚಜನ್ಯ ಮೊಳಗಿಸುವ ಮೂಲಕ ಚುನಾವಣಾ ಸಮರ ಆರಂಭಿಸಿದಾಗ, ಈ ಐತಿಹಾಸಿಕ ಯಾತ್ರೆಯನ್ನು ಆಯೋಜಿಸಿದವರು ಡಿ.ಕೆ.ಶಿವಕುಮಾರ್. ಇದರಿಂದಲೇ ಕಾಂಗ್ರೆಸ್ ಪಕ್ಷ 139 ಸ್ಥಾನಗಳನ್ನು ಗಳಿಸಿ ಸ್ವಂತ ಬಲದ ಮೇಲೆ ಸರಕಾರವನ್ನು ರಚಿಸುವಂತಾಯಿತು.

1999ರಲ್ಲಿ ಡಿ.ಕೆ.ಶಿವಕುಮಾರ್ ಅವರಿಗೆ ಮತ್ತೊಮ್ಮೆ ಸಾತನೂರು ಕ್ಷೇತ್ರದಿಂದ ಸ್ಪರ್ಧಿಸಲು ಕಾಂಗ್ರೆಸ್ ಪಕ್ಷ ಅನುಮತಿ ನೀಡಿತ್ತು. ಈ ಭಾರಿ ಅವರ ಎದುರಾಳಿ ಎಚ್.ಡಿ.ದೇವೇಗೌಡರ ಪುತ್ರ, ಎಚ್.ಡಿ.ಕುಮಾರಸ್ವಾಮಿ, ದೇವೇಗೌಡರು ರಾಜಕೀಯ ಸ್ಥಿತ್ಯಂತರದಿಂದ ಅಂದಿನ ಪ್ರಧಾನಿಯಾಗಿದ್ದರು. ಆದರೆ ಆ ಚುನಾವಣೆಯಲ್ಲಿ ಕುಮಾರಸ್ವಾಮಿ ಸೋತರು. ಡಿ.ಕೆ.ಶಿವಕುಮಾರ್ ಸತತ 3ನೇ ಬಾರಿಗೆ ಮರಳಿ ಗೆಲುವು ಸಾಧಿಸಲು ಸಾಧ್ಯವಾಯಿತು. ಎಸ್.ಎಂ.ಕೃಷ್ಣ ಸಂಪುಟದಲ್ಲಿ ಸಚಿವರನ್ನಾಗಿ ನೇಮಿಸಿ ಮಹತ್ವದ ಸಹಕಾರ ಖಾತೆ ನೀಡುವ ಮೂಲಕ ಡಿ.ಕೆ.ಶಿವಕುಮಾರ್ ಶ್ರಮಕ್ಕೆತಕ್ಕ ಮನ್ನಣೆ ನೀಡಿದರು.(1999-2002).

2013ರಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಮರಳಿ ಬಂದು ಸಿದ್ದರಾಮಯ್ಯ ಮುಖ್ಯಮಂತ್ರಿಗಳಾಗಿ ಆಯ್ಕೆಗೊಂಡಾಗ ಆರಂಭದಲ್ಲಿ ಶಿವಕುಮಾರ್ ಅವರಿಗೆ ಸಚಿವ ಸ್ಥಾನ ಕೈತಪ್ಪಿತ್ತು. ಬಳಿಕ 7 ತಿಂಗಳ ಅಲ್ಪಾವಧಿಯ ನಂತರ ಶಿವಕುಮಾರ್, ಸಿದ್ಧರಾಮಯ್ಯ ಸಂಪುಟದಲ್ಲಿ ಸಚಿವ ಸ್ಥಾನ ಪಡೆದುಕೊಂಡರು. ಇಂಧನ ಖಾತೆಯಂತಹ ಪ್ರಮುಖ ಖಾತೆಯನ್ನು ನೀಡಲಾಯಿತು.

ರೈತ ಸೂರ್ಯ ಯೋಜನೆ ರೂವಾರಿ: ಇಂಧನ ಸಚಿವರಾಗಿ ಡಿ.ಕೆ.ಶಿವಕುಮಾರ್ ಜಡ್ಡುಗಟ್ಟಿದ್ದ ಇಲಾಖೆಯನ್ನು ಅಮೂಲಾಗ್ರ ಸುಧಾರಣೆ ಮಾಡಲಾರಂಭಿಸಿದರು. ಹಿಂದಿನ ಸರಕಾರಗಳ ಅವಧಿಯಲ್ಲಿ ಸಹಿ ಮಾಡಲಾಗಿದ್ದ ಹಲವು ವಿದ್ಯುತ್ ಖರೀದಿ ಒಪ್ಪಂದಗಳನ್ನು ರದ್ದುಗೊಳಿಸಿದರು. ವಿದ್ಯುತ್ ಖರೀದಿಯಲ್ಲಿ ಅಕ್ರಮ ಕುರಿತ ಸದನ ಸಮಿತಿ ರಚನೆಗೆ ಕಾರಣರಾದರು. ರೈತ ಸೂರ್ಯ ಯೋಜನೆಯನ್ನು ರೂಪಿಸಿ ಭೂ ಮಾಲಕರಾದ ರೈತರು ಸ್ವಯಂ 1ರಿಂದ 3 ಮೆ.ವ್ಯಾ. ಸೌರವಿದ್ಯುತ್ ಉತ್ಪಾದನೆ ಮಾಡುವಂತೆ ಅವಕಾಶ ಕಲ್ಪಿಸಿದರು. ರಾಜ್ಯ ಸರಕಾರದ ಈ ಯೋಜನೆಯನ್ನು ಕೇಂದ್ರ ಸರಕಾರ ಮುಕ್ತ ಕಂಠದಿಂದ ಪ್ರಶಂಸಿದೆಯಲ್ಲದೇ ಉಳಿದ ರಾಜ್ಯಗಳೂ ಕರ್ನಾಟಕದ ಮಾದರಿ ಅನುಸರಿಸುವಂತೆ ಕೇಂದ್ರ ಸಚಿವರೇ ಕರೆ ನೀಡಿದ್ದು, ನಿಜಕ್ಕೂ ಹೆಮ್ಮೆಯ ಸಂಗತಿ.

2018ರಲ್ಲಿ ಅಸ್ತಿತ್ವಕ್ಕೆ ಬಂದ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರಕಾರದಲ್ಲಿ ಮೊದಲಿಗೆ ಜಲಸಂಪನ್ಮೂಲ ನಂತರ ಹೆಚ್ಚುವರಿಯಾಗಿ ಕನ್ನಡ ಮತ್ತು ಸಂಸ್ಕೃತಿ ಖಾತೆಯನ್ನು ಪಡೆದ ಡಿ.ಕೆ.ಶಿವಕುಮಾರ್ ಅನೇಕ ಕಾರ್ಯಕ್ರಮಗಳನ್ನು ಅನುಷ್ಠಾನಕ್ಕೆ ತಂದರು, ಮಹದಾಯಿ ಸಮಸ್ಯೆ ಪರಿಹಾರ, ಎತ್ತಿನಹೊಳೆ, ಮೇಕೆದಾಟು ಯೋಜನೆಗಳ ಪ್ರಗತಿಗೆ ತಮ್ಮದೇ ಆದ ಕೊಡುಗೆ ನೀಡಿದ ಅವರು ರಾಜ್ಯದಲ್ಲಿ ಅತೀ ಹೆಚ್ಚು ಚೆಕ್ ಡ್ಯಾಮ್‌ಗಳ ನಿರ್ಮಾಣಕ್ಕೆ ಪ್ರೋತ್ಸಾಹಧನ ನೀಡಿಕೆ ಮೂಲಕ ಉತ್ತೇಜಿಸಿದರು.ಕಾಂಗ್ರೆಸ್ ಕಟ್ಟಾಳು ಆಗಿರುವ ಡಿ.ಕೆ.ಶಿವಕುಮಾರ್ 2017ರಲ್ಲಿ ಹೈಕಮಾಂಡ್ ವಹಿಸಿದ ಜವಾಬ್ದಾರಿಯ ಮೇರೆಗೆ ಗುಜರಾತ್ ಕಾಂಗ್ರೆಸ್ ಶಾಸಕರನ್ನು ರಕ್ಷಿಸಿಟ್ಟುಕೊಟ್ಟ ಅವರು, ಅದಕ್ಕಾಗಿ ಭಾರಿ ಬೆಲೆಯನ್ನೇ ತೆರಬೇಕಾಯಿತಾದರೂ ವಿಚಲಿತರಾಗಲಿಲ್ಲ.

ಪಕ್ಷದ ಸಂಘಟನೆ: ಕೆಪಿಸಿಸಿ ಅಧ್ಯಕ್ಷ ಸ್ಥಾನಕ್ಕೆ ಸೋನಿಯಾ ಗಾಂಧಿ ಅವರು 2020ರ ಮಾರ್ಚ್ 11ರಂದು ಡಿ.ಕೆ.ಶಿವಕುಮಾರ್ ಅವರನ್ನು ನೇಮಿಸಿದರು. ಈ ನೇಮಕವಾದ ಕೆಲವೇ ದಿನಗಳಲ್ಲಿ ಕೋವಿಡ್ ಸೋಂಕು ದೇಶದೆಲ್ಲೆಡೆ ಆವರಿಸಿತು. ಈ ವೇಳೆ ಶಿವಕುಮಾರ್ ಅವರು, ಪಕ್ಷದ ನಾಯಕರು ಹಾಗೂ ಕಾರ್ಯಕರ್ತರಿಗೆ ಉತ್ತೇಜನ ನೀಡಿ, ಅವರು ಸಂಕಷ್ಟಕ್ಕೆ ಸಿಲುಕಿರುವ ಜನರಿಗೆ ಸಹಾಯ ಮಾಡಲು ಕರೆ ನೀಡಿದರು.

ಕಾಂಗ್ರೆಸ್ ವತಿಯಿಂದ ಪಕ್ಷದ ಸದಸ್ಯತ್ವ ನೋಂದಣಿ ಅಭಿಯಾನ ಆರಂಭಿಸಿದಾಗ, ಮತ್ತೆ ತಮ್ಮ ಕಾರ್ಯಕರ್ತರನ್ನು ಜನರತ್ತ ಕಳುಹಿಸಿ ರಾಜ್ಯದಲ್ಲಿ ಯಶಸ್ವಿಯಾಗಿ ಸದಸ್ಯತ್ವ ನೋಂದಣಿ ಅಭಿಯಾನ ಮಾಡಿದರು. ಪಕ್ಷದ ಸದಸ್ಯತ್ವ ಅಭಿಯಾನ ಯಶಸ್ವಿ ಜಾರಿ ಹಾಗೂ ರಾಜ್ಯದಲ್ಲಿ 78ಲಕ್ಷ ಸದಸ್ಯತ್ವ ನೋಂದಣಿ ಮೂಲಕ ದೇಶದಲ್ಲಿ ಪ್ರಥಮ ಸ್ಥಾನ ಪಡೆದು ಕಾಂಗ್ರೆಸ್ ಪಕ್ಷಕ್ಕೆ ಶಕ್ತಿ ತುಂಬಿದರು. ಕಾವೇರಿ ಜಲಾನಯನ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ, ವಿದ್ಯುತ್ ಉತ್ಪಾದನೆ ಸೇರಿದಂತೆ ಹಲವು ಪ್ರಯೋಜನಗಳನ್ನು ಹೊಂದಿರುವ ಮೇಕೆದಾಟು ಯೋಜನೆಗೆ ಸರಕಾರ ನಿರ್ಲಕ್ಷ್ಯ ವಹಿಸಿದಾಗ ಈ ಯೋಜನೆ ಆಗ್ರಹಿಸಿ, ಈ ಭಾಗದಲ್ಲಿ 160 ಕಿ.ಮೀ ಪಾದಯಾತ್ರೆ ಮಾಡಿದರು. ಅಲ್ಲದೆ, ಕೇಂದ್ರದ ಕೃಷಿ ಕಾಯ್ದೆ ವಿರುದ್ಧ ಬೀದಿಗಿಳಿದು ಹೋರಾಟ ಮಾಡಿದರು. ರೈತರ ಬೆನ್ನಿಗೆ ನಿಂತರು. ಬಿಜೆಪಿ ಸರಕಾರದ ವಿರುದ್ಧ ಶೇ.40ರಷ್ಟು ಕಮಿಷನ್, ಪೇ ಸಿಎಂ, ನೇಮಕಾತಿ ಅಕ್ರಮ ವಿರುದ್ಧ ಬೀದಿಗಿಳಿದು ಹೋರಾಟ ಮಾಡಿದರು.

ರಾಹುಲ್ ಗಾಂಧಿ ಭಾರತ ಜೋಡೋ ಯಾತ್ರೆ ಆರಂಭಿಸಿದ ನಂತರ ಕರ್ನಾಟಕದಲ್ಲಿ 21 ದಿನಗಳ ಕಾಲ 550 ಕಿ.ಮೀ ಉದ್ದದ ಭಾರತ ಜೋಡೋ ಯಾತ್ರೆ ಯಶಸ್ವಿ ಆಯೋಜನೆ ಮಾಡಿದರು. ಈ ಯೋಜನೆ ಹಾದು ಹೋದ ಮಾರ್ಗದಲ್ಲಿ ಕಾಂಗ್ರೆಸ್ ಪಕ್ಷ-2023ರ ಸಾರ್ವತ್ರಿಕ ಚುನಾವಣೆಯಲ್ಲಿ ಭರ್ಜರಿ ಗೆಲುವು ಸಾಧಿಸುವಲ್ಲಿ ಪ್ರಮುಖ ಕಾರಣವಾಯಿತು.

ಡಿ.ಕೆ. ಶಿವಕುಮಾರ್ ಅಧ್ಯಕ್ಷತೆಯಲ್ಲಿ ಕಾಂಗ್ರೆಸ್ ಪಕ್ಷ 2023ರ ವಿಧಾನಸಭೆ ಚುನಾವಣೆಯಲ್ಲಿ 136 ಕ್ಷೇತ್ರಗಳಲ್ಲಿ ಗೆದ್ದು ಭರ್ಜರಿ ಬಹುಮತದೊಂದಿಗೆ ಸರಕಾರ ರಚನೆ ಮಾಡಿತು. ಈ ಸರಕಾರದಲ್ಲಿ ಉಪ ಮುಖ್ಯಮಂತ್ರಿಯಾಗಿ, ಜಲಸಂಪನ್ಮೂಲ ಇಲಾಖೆ ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾಗಿ ಅಧಿಕಾರ ನಡೆಸಿದರು.

ಜ್ಯೋತಿ ಬಳ್ಳಾರಿ ಸಹಾಯರ್ಥವಾಗಿ ನಡೆದ ಜನರ ಮನಸ್ಸು ಸೂರೆಗೊಂಡ ನಾಟಕ ಮತ್ತು ನೃತ್ಯ ಕಾರ್ಯಕ್ರಮ



ರಾಯಚೂರು ನಗರದ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಶ್ರೀ ದುರ್ಗಾ ಶಕ್ತಿ ನಾಟ್ಯಸಂಘ ಗೋಕಾಕ್. ಬಳ್ಳಾರಿ ಜ್ಯೋತಿ ಇವರ ಸಂಯುಕ್ತ ಆಶ್ರಯ ದಲ್ಲಿ ಶ್ರೀ ಸಂಗಮೇಶ್ವರ ಸಂಸ್ಕೃತಿಕ ಹಾಗೂ ನಾಟ್ಯ ಸಂಘ ಗ'ಂಳ'ೀದ'ಗ'ಂಡ'್ಡವ'ರ' ಸಹಕಾರದೊಂದಿಗೆ ಖ್ಯಾತ ನೃತ್ಯ ಗಾರತಿ ಜ್ಯೋತಿ ಬಳ್ಳಾರಿ ಅವರ ಸಹಾಯರ್ಥವಾಗಿ ನಡೆದ ನೃತ್ಯ ಕಾರ್ಯಕ್ರಮ ಮತ್ತು ಹೌದಲೇ ರಂಗಿ. ಉದಲೇನು ಪುಂಗಿ ಹಾಸ್ಯ ಭರಿತವಾಗಿರುವ ನಾಟಕದ ಪ್ರದರ್ಶನ ಜನರನ್ನೂ ನಗೆಗಡಲಿಗೆ ಕ'ೊಂಡ'ಂಯು'ಂವ'್ರದ'ರ'ಲ್ಲಿ ಯಶಸ್ವಾಯಿತು. ಜ್ಯೋತಿಯನ್ನ ಬೆಳಗಿಸುವ ಮೂಲಕ ಕಾ ಯ'ರ್ಕ'್ರವ'ಂವ'ನ'್ನ ಉದ್ಘಾಟಿಸ'ಲಾಯಿಂತ'ಂ. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ರಂಗಭೂಮಿಯ ಕಲಾವಿದರು ಜೆ.ಡಿ.ಎಸ್ ಪಕ್ಷದ ರಾಜ್ಯ ಘಟಕದ ಪ್ರಮುಖ ಪದಾಧಿಕಾರಿಗಳಾದ ಮಹಾಂತೇಶ್ ಪಾಟೀಲ್ ಅತ್ತನೂರು ಮಾತನಾಡುತ್ತಾ. ಜ್ಯೋತಿ ಬಳ್ಳಾರಿಯವರು ನಮ್ಮ ಭಾಗದ ನಡೆದ ಹಲವಾರು ನಾಟಕಗಳಲ್ಲಿ ತಮ್ಮ ಡ್ಯಾನ್ಸಿನ ಮೂಲಕ ಪ್ರೇಕ್ಷಕರ ಮನಸ್ಸನ್ನು ಗೆಲ್ಲುವುದರಲ್ಲಿ ಯಶಸ್ವಿಯಾಗಿದ್ದಾರೆ. ಅವರು ಡ್ಯಾನ್ಸ್ ಮಾಡುತ್ತಾರೆ ಎಂದರೆ ಹಲವಾರು ಜನ ಡ್ಯಾನ್ಸನ್ನು ನೋಡಲು ಬರುತ್ತಿದ್ದರು .ಇಂದು ಅವರ ಸಹಾಯರ್ಥವಾಗಿ ಈ ಒಂದು ಕಾರ್ಯಕ್ರಮವವನ್ನು ಆಯೋಜನೆ ಮಾಡಲಾಗಿದೆ. ಇಂಥ ಕಲಾವಿದರಿಗೆ ಸಂಕಷ್ಟ ಸಮಯದಲ್ಲಿ ಸಹಾಯ ಮಾಡೋದು ಪ್ರತಿಯೊಬ್ಬ ಕಲಾಭಿಮಾನಗಳ ಕರ್ತವ್ಯವಾಗಿದೆ. ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ ಕನ್ನಡ ಜಾನಪದ ಪರಿಷತ್ತಿನ ಜಿಲ್ಲಾ ಪ್ರಧಾನ ಕಾರ್ಯದರ್ಶಿ, ಡಾ. ದಂಡಪ್ಪ ಬಿರಾದಾರ ಮಾತನಾಡುತ್ತಾ ನಿಜವಾದ ಕಲೆ ಸಿಗುವುದು ರಂಗಭೂಮಿಯ ಕಲಾವಿದರಲ್ಲಿ. ಸಿನಿಮಾದಲ್ಲಿ ಒಂದು ನೃತ್ಯವನ್ನು ಶೂಟಿಂಗ್ ಮಾಡಬೇಕಾದರೆ ಹತ್ತಾರು ಸಲ ಕಟ್. ಎಂದು ಹೇಳುತ್ತಾರೆ ಆದರೆ ಒಬ್ಬ ರಂಗಭೂಮಿ ಕಲಾವಿದ ರಂಗ ಪ್ರವೇಶ ಮಾಡಿದ ಮೇಲೆ ಆತನಿಗೆ ಇರುವಂತ ಡೈಲಾಗಳು ನಿರಂತರವಾಗಿ ಹೇಳುತ್ತಾನೆ ಕ.ಲೆಯನ್ನ ಕರಗತ ಮಾಡುವುದೇ ರಂಗಭೂಮಿ .ಇವತ್ತು ನಾವು ಸಣ್ಣವರು ಇರುವ ಸಂದರ್ಭದಲ್ಲಿ ಜ್ಯೋತಿಯವರು ನಮ್ಮ ಭಾಗದ ಕಡೆ ನಾಟಕಗಳನ್ನ ಅದರಲ್ಲಿ ನೃತ್ಯ ಮಾಡಲು ಬರ್ತಾ ಇದ್ದರು. ನಮ್ಮೆಲ್ಲ ಜನ ಅವರ ಡ್ಯಾನ್ಸನ್ನು ನೋಡಲು ಹೋಗುತ್ತಿದ್ದರು. ಇಂದು ಈ ನಾಟಕದಲ್ಲಿ ವಿಶೇಷವಾಗಿ ಸಂಜು ಬಸಯ್ಯ ಮತ್ತು ಪಲ್ಲವಿ. ಮಂಜು ಗುಳೇದಗುಡ್ಡ ಹಾಗೂ ದಿವ್ಯ ಇವರ ಆಕರ್ಷಣವಾದ ಕಲೆಯನ್ನೂ ಎಲ್ಲ ಪ್ರೇಕ್ಷಕರು ನೋಡಿ ತನುಮನ ಧನದಿಂದ ಸಹಾಯ ಮಾಡಿ ಕಲಾವಿದರನ್ನು ಪ್ರೋತ್ಸಾಹಿಸುವಂತ ಕಲೆ ರಾಯಚೂರಿನ ಜನತೆಗೆ ಇದೆ ಆ ಕೆಲಸವನ್ನು ತಾವು ಮಾಡಿದ್ದೀರಿ .ಉತ್ತರ ಕರ್ನಾಟಕದ ಜನ ರಂಗಭೂಮಿಯ ಕಲಾವಿದರನ್ನು ಗೌರವಿಸುತ್ತಾರೆ. ಸನ್ಮಾನಿಸುತ್ತಾರೆ. ಪ್ರೋತ್ಸಾಹಿಸುತ್ತಾರೆ. ಸಹಾಯ ಮಾಡುತ್ತಾರೆ. ಬೆಳೆಸುತ್ತಾರೆ ಅದು ಈ ಭಾಗದ ಜನರ ಗುಣವಾಗಿದೆ ಎಂದು ಹೇಳಿದರು. ಕಾರ್ಯಕ್ರಮದ ದಿವ್ಯ ಸಾನಿಧ್ಯ ವಹಿಸಿದ್ದ ಅಭಿನವ ಶ್ರೀ ಅಭಿನವ ರಾಚೋಟೀ ಶಿವಾಚಾರ್ಯ ವ'ಂಹಾಸ್ವಾವಿಂಗ'ಳ'ಂ ಸೋಮವಾರಪೇಟೆ ರಾಯಚೂರು .ಮಾತನಾಡುತ್ತಾ ಇಂದು ಬಹಳಷ್ಟು ಕಲಾವಿದರು ಅದರಲ್ಲಿ ರಂಗಭೂಮಿಯ ಕಲಾವಿದರು ಇತ್ತೀಚಿಗೆ ಮೊಬೈಲು ಟಿವಿಗಳ ಪ್ರಭಾವದಿಂದಾಗಿ ನಾಟಕ ನೋಡುವುದನ್ನ ಕಡಿಮೆ ಮಾಡುತ್ತಿದ್ದೀರಿ .ರಂಗಭೂಮಿಯ

3ನೇ ಪುಟಕ್ಕೆ

ಸಿರವಾರ: ಪೂರ್ಣಗೊಳ್ಳದ ಕಾಮಗಾರಿಯಿಂದ ಸಾರ್ವಜನಿಕರು, ವರ್ತಕರ ಪರದಾಟ



ಸಿರವಾರ: ಪಟ್ಟಣದ ಮುಖ್ಯರಸ್ತೆಯಲ್ಲಿ ಎ.ಪಿ.ಎಂ.ಸಿ () ಕ್ರಾಸ್‌ನಿಂದ ಸಂಗಪ್ಪ ಕೆನಾಲ್ ವರೆಗೆ ಕೈಗೊಂಡಿರುವ ರಸ್ತೆ ನಿರ್ಮಾಣ ಮತ್ತು ಕುಡಿಯುವ ನೀರಿನ ಪೈಪ್‌ಲೈನ್ ಅಳವಡಿಕೆ ಕಾಮಗಾರಿ ವಿಳಂಬವಾಗುತ್ತಿರುವುದು ಸ್ಥಳೀಯ ವರ್ತಕರು ಮತ್ತು ಸಾರ್ವಜನಿಕರಿಗೆ ತೀವ್ರ ತೊಂದರೆಯುಂಟು ಮಾಡಿದೆ.

ಅಗೆದ ಗುಂಡಿಗಳಲ್ಲಿ ನಿಂತ ಮಳೆನೀರು:

ಅಭಿವೃದ್ಧಿ ಕಾರ್ಯಕ್ಕಾಗಿ ರಸ್ತೆಯುದ್ದಕ್ಕೂ ಅಗೆಯಲಾಗಿರುವ ಹಳ್ಳಗಳು ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಮಳೆಯಿಂದಾಗಿ ಸಂಪೂರ್ಣವಾಗಿ ಜಲಾವೃತಗೊಂಡಿವೆ. ಮಣ್ಣು ಮಿಶ್ರಿತ ನೀರು ಮತ್ತು ಹೂಳು ರಸ್ತೆಯಲ್ಲೆಲ್ಲಾ ಹರಡಿದ್ದು, ವಾಹನ ಸವಾರರು ಸಂಚರಿಸಲು ಹರಸಾಹಸ ಪಡುವಂತಾಗಿದೆ.

ವರ್ತಕರ ಅಳಲು:

ರಸ್ತೆ ಅಗೆದ ಪರಿಣಾಮ ತಮ್ಮ ಅಂಗಡಿಗಳ ಮುಂಭಾಗದಲ್ಲಿ ದೊಡ್ಡ ಗುಂಡಿಗಳು ಬಿದ್ದಿದ್ದು, ಗ್ರಾಹಕರು ಅಂಗಡಿಗೆ ಪ್ರವೇಶಿಸಲು ಸಾಧ್ಯವಾಗುತ್ತಿಲ್ಲ ಎಂದು ವರ್ತಕರು ಅಳಲು ತೋಡಿಕೊಂಡಿದ್ದಾರೆ.

ಗ್ರಾಹಕರ ಕೊರತೆ: ಅಂಗಡಿ ಮುಂಭಾಗ ಕೆಸರು ಮತ್ತು ನೀರು ನಿಂತಿರುವುದರಿಂದ ಗ್ರಾಹಕರು ಅಂಗಡಿಯತ್ತ ಬರಲು ಹಿಂದೇಟು ಹಾಕುತ್ತಿದ್ದಾರೆ, ಇದರಿಂದಾಗಿ ದೈನಂದಿನ ವಹಿವಾಟಿಗೆ ತೀವ್ರ ಹೊಡೆತ ಬಿದ್ದಿದೆ.

ಅಪಘಾತದ ಭೀತಿ: ದ್ವಿಚಕ್ರ ವಾಹನ ಸವಾರರು ನಿಂತ ನೀರಿನಲ್ಲಿ ಗುಂಡಿ ಕಾಣದೆ ಬಿದ್ದು ಗಾಯಗೊಂಡಿರುವ ನಿದರ್ಶನಗಳೂ ಇವೆ.

ಆಡಳಿತ ಮಂಡಳಿಯ ನಿರ್ಲಕ್ಷ್ಯ:

ಕಾಮಗಾರಿಯನ್ನು ಪ್ರಾರಂಭಿಸಿದವರು ಅದನ್ನು ಶೀಘ್ರವಾಗಿ ಪೂರ್ಣಗೊಳಿಸಬೇಕಿತ್ತು. ಮಳೆಗಾಲ ಆರಂಭವಾಗುವ ಮುನ್ನವೇ ಎಚ್ಚೆತ್ತುಕೊಳ್ಳಬೇಕಿದ್ದ ಗುತ್ತಿಗೆದಾರರು ಮತ್ತು ಸ್ಥಳೀಯ ಆಡಳಿತ ಮಂಡಳಿ ಕೇವಲ ಗುಂಡಿಗಳನ್ನು ಅಗೆದು ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಿರುವುದು ಸಾರ್ವಜನಿಕರ ಆಕ್ರೋಶಕ್ಕೆ ಕಾರಣವಾಗಿದೆ, ಎಂದು ಸ್ಥಳೀಯರು ಆರೋಪಿಸಿದ್ದಾರೆ.

ತಕ್ಷಣವೇ ಸಂಬಂಧಪಟ್ಟ ಇಲಾಖೆಯ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ, ಬಾಕಿ ಉಳಿದಿರುವ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಮತ್ತು ಸದ್ಯ ಉಂಟಾಗಿರುವ ರಸ್ತೆ ಅವ್ಯವಸ್ಥೆಯನ್ನು ಸರಿಪಡಿಸಬೇಕು ಎಂದು ನಾಗರಿಕರು ಮತ್ತು ವರ್ತಕರು ಒತ್ತಾಯಿಸಿದ್ದಾರೆ.

ಡಾ.ಶರಣಪ್ರಕಾಶ್ ಪಾಟೀಲ್‌ಗೆ ಸ್ಥಾನ; ಮತ್ತೊಮ್ಮೆ ಸಚಿವರಾಗಿ ಪ್ರಮಾಣ ವಚನ ಸ್ವೀಕಾರ

ಕಲಬುರಗಿರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಡಿ.ಕೆ.ಶಿವಕುಮಾರ್ ಇಂದು ಪ್ರಮಾಣ ವಚನ ಸ್ವೀಕರಿಸಿದ್ದು, ಸಿಎಂ ಡಿಕೆಶಿ ಸಚಿವ ಸಂಪುಟದಲ್ಲಿ ಡಾ.ಶರಣಪ್ರಕಾಶ್ ಪಾಟೀಲ್ ಅವರು ಕೂಡಾ ಸ್ಥಾನ ಪಡೆದಿದ್ದಾರೆ.

ವಿದ್ಯಾರ್ಥಿ ದಿನಗಳಲ್ಲೇ ರಾಷ್ಟ್ರೀಯ ವಿದ್ಯಾರ್ಥಿ ಒಕ್ಕೂಟ (ಎನ್‌ಎಸ್‌ಯುಐ) ಮೂಲಕ ರಾಜಕೀಯ ಪ್ರವೇಶಿಸಿದ ಡಾ.ಶರಣಪ್ರಕಾಶ್ ಪಾಟೀಲ್ ಅವರು, 2004ರಲ್ಲಿ ಮೊದಲ ಬಾರಿಗೆ ಶಾಸಕರಾಗಿ ಆಯ್ಕೆಯಾಗಿ, 2008, 2013 ಮತ್ತು 2023ರಲ್ಲೂ ಗೆಲುವು ಸಾಧಿಸಿ ತಮ್ಮ ರಾಜಕೀಯ ಪ್ರಭಾವವನ್ನು ವಿಸ್ತರಿಸಿದರು.

ರುದ್ರಪ್ಪ ಪಾಟೀಲ್, ಮಾಲಕಮ್ಮ ಪಾಟೀಲ್ ಅವರ ಪುತ್ರನಾಗಿ 1967ರ ಏಪ್ರಿಲ್ 20ರಂದು ಕಲಬುರಗಿ ಜಿಲ್ಲೆಯ ಸೇಡಂ ತಾಲೂಕಿನ ಉಡಗಿಯಲ್ಲಿ ಜನಿಸಿದ ಡಾ.ಶರಣಪ್ರಕಾಶ್ ಪಾಟೀಲ್, ವೈದ್ಯಕೀಯ ವೃತ್ತಿಯಿಂದ ರಾಜಕೀಯಕ್ಕೆ ಬಂದವರು. ಎಂಬಿಬಿಎಸ್ ಹಾಗೂ ಡರ್ಮಾಟಾಲಜಿಯಲ್ಲಿ ಎಂಡಿ ಪದವಿ ಪಡೆದಿರುವ ಅವರು ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದು, ಸೇಡಂ ಕ್ಷೇತ್ರವನ್ನು ಪ್ರತಿನಿಧಿಸುತ್ತಿದ್ದಾರೆ.

ಬಳ್ಳಾರಿ ಜಿಲ್ಲೆಯನ್ನು ಬಾಲಕಾರ್ಮಿಕ ಮುಕ್ತಗೊಳಿಸಲು ಹಠಾತ್ ದಾಳಿ ಹಾಗೂ ಕಟ್ಟುನಿಟ್ಟಿನ ಕ್ರಮ ಜಾರಿಗೊಳಿಸಲು ಡಿಸಿ ನಾಗೇಂದ್ರ ಪ್ರಸಾದ್.ಕೆ ಸೂಚನೆ



ಬಳ್ಳಾರಿ,ಜೂ.03-

ಜಿಲ್ಲೆಯಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿಯನ್ನು ಸಂಪೂರ್ಣವಾಗಿ ಬೇರುಸಹಿತ ಕಿತ್ತೆಸೆಯಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ನಿರಂತರ ಹಠಾತ್ ದಾಳಿ ನಡೆಸುವ ಮೂಲಕ ಕಟ್ಟುನಿಟ್ಟಿನ ಕ್ರಮ ಜರುಗಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಮಂಗಳವಾರ ನೂತನ ಜಿಲ್ಲಾಡಳಿತ ಭವನದ ವಿಡಿಯೋ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಟಾಸ್ಕ್ ಫೋರ್ಸ್ ಸಮಿತಿ ಸಭೆ ಹಾಗೂ ಜಿಲ್ಲಾ ಮಟ್ಟದ ಕಾರ್ಯಪಡೆ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿವಿಧ ಇಲಾಖೆಗಳ ಅಧಿಕಾರಿಗಳನ್ನೊಳಗೊಂಡ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಕಾರ್ಯಪಡೆಯು ತನ್ನ ಇಲಾಖೆಯ ನಿಯಮಿತ ಕೆಲಸಗಳ ಜೊತೆಗೆ, ಬಾಲಕಾರ್ಮಿಕ ವ್ಯವಸ್ಥೆಯ ವಿರುದ್ಧ ವ್ಯಾಪಕ ಜನಜಾಗೃತಿ ಮೂಡಿಸಬೇಕು ಎಂದು ಹೇಳಿದರು.

ತಹಶೀಲ್ದಾರರ ಅಧ್ಯಕ್ಷತೆಯಲ್ಲಿರುವ ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳು ಮತ್ತಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕಿದೆ. ಕಳೆದ ಸಾಲಿನಲ್ಲಿ 33 ತಾಲೂಕು ಮಟ್ಟದ ಸಭೆಗಳನ್ನು ನಡೆಸಲಾಗಿದ್ದು, ಇನ್ಮುಂದೆ ತಾಲೂಕು ಮಟ್ಟದ ಸಭೆ ಹಾಗೂ ಹಠಾತ್ ದಾಳಿಗಳಲ್ಲಿ ತಾಲೂಕು ಅಧಿಕಾರಿಗಳು ಕಡ್ಡಾಯವಾಗಿ ಭಾಗವಹಿಸುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಮೌನೇಶ್.ಎ ಅವರು ಮಾತನಾಡಿ, ರಾಷ್ಟ್ರಿಯ ಮಕ್ಕಳ ಹಕ್ಕುಗಳ ಆಯೋಗದ ನಿರ್ದೇಶನದಂತೆ ಪ್ರತಿ ತಿಂಗಳು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳ ಮೂಲಕ ಇಲ್ಲಿಯವರೆಗೆ (2025-26 ನೇ ಸಾಲಿನಲ್ಲಿ) 20 ಆಕಸ್ಮಿಕ ದಾಳಿಗಳನ್ನು ನಡೆಸಲಾಗಿದೆ. ಈ ಕಾರ್ಯಾಚರಣೆಯಲ್ಲಿ ಒಟ್ಟು 58 ಬಾಲಕಾರ್ಮಿಕರನ್ನು ರಕ್ಷಿಸಿ, ಮಕ್ಕಳ ಕಲ್ಯಾಣ ಸಮಿತಿ ಮತ್ತು ಪೋಷಕರ ವಶಕ್ಕೆ ಒಪ್ಪಿಸಲಾಗಿದೆ. ಮಕ್ಕಳನ್ನು ದುಡಿಸಿಕೊಳ್ಳುತ್ತಿದ್ದ ಮಾಲೀಕರ ವಿರುದ್ಧ ವಿವಿಧ ಪೊಲೀಸ್ ಠಾಣೆಗಳಲ್ಲಿ 31 ಎಫ್.ಐ.ಆರ್ ದಾಖಲಿಸಲಾಗಿದ್ದು, ಕರಪತ್ರಗಳ ಮೂಲಕ ಕಟ್ಟುನಿಟ್ಟಿನ ಎಚ್ಚರಿಕೆ ನೀಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ನಿರಂತರವಾಗಿ ನಡೆಯುವ ಆಕಸ್ಮಿಕ ದಾಳಿಗಳ ಸಂದರ್ಭದಲ್ಲಿ ರಕ್ಷಿಸಲಾಗುವ ಬಾಲಕಾರ್ಮಿಕರನ್ನು ಮಕ್ಕಳ ಕಲ್ಯಾಣ ಸಮಿತಿಯ (ಸಿಡಬ್ಲ್ಯೂಸಿ) ಮುಂದೆ ಹಾಜರುಪಡಿಸಲು ಹಾಗೂ ಅವರನ್ನು ಮುಖ್ಯವಾಹಿನಿ ಶಾಲೆಗಳಿಗೆ ದಾಖಲಿಸಲು ವಾಹನದ ಅವಶ್ಯಕತೆ ಇದ್ದು, ದಾಳಿ ಮತ್ತು ರಕ್ಷಣಾ ಕಾರ್ಯಗಳಿಗಾಗಿ ಪ್ರತ್ಯೇಕ ವಾಹನವನ್ನು ಒದಗಿಸುವ ಕುರಿತು ಸಭೆಗೆ ತಿಳಿಸಿದರು.

ಸಮೀಕ್ಷೆ ಹಾಗೂ ಮಾಸಿಕ ಆಕಸ್ಮಿಕ ದಾಳಿಗಳ ಮೂಲಕ ಗುರುತಿಸಲ್ಪಡುವ ಮಕ್ಕಳಿಗೆ ತಾತ್ಕಾಲಿಕವಾಗಿ ವಿಶೇಷ ತರಬೇತಿ ನೀಡಿ, ಅವರ ಕಲಿಕಾ ಮಟ್ಟವನ್ನು ಸುಧಾರಿಸಿದ ನಂತರ ಮುಖ್ಯವಾಹಿನಿ ಶಾಲೆಗಳಿಗೆ ಸೇರಿಸಲು ಯೋಜಿಸಲಾಗಿದೆ. ಇದಕ್ಕಾಗಿ ಕೆ.ಎಂ.ಇ.ಆರ್.ಸಿ ಅಡಿಯಲ್ಲಿ ಈಗಾಗಲೇ ಅನುಮೋದನೆ ಪಡೆದಿರುವ ಬಾಲಕಾರ್ಮಿಕರ ವಿಶೇಷ ತರಬೇತಿ ಕೇಂದ್ರವನ್ನು ಶೀಘ್ರದಲ್ಲೇ ಪ್ರಾರಂಭಿಸುವ ಕುರಿತು ಸಭೆಯಲ್ಲಿ ಪ್ರಸ್ತಾಪಿಸಿದರು.

★ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ:★

ಜಿಲ್ಲಾ ಬಾಲ ಕಾರ್ಮಿಕ ಯೋಜನೆಯ ಅಧ್ಯಕ್ಷರೂ ಆದ ನಾಗೇಂದ್ರ ಪ್ರಸಾದ್.ಕೆ ಅವರು ಮಾತನಾಡಿ, ಇದೇ ಜೂನ್ 12 ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಜಂಟಿ ಸಹಯೋಗದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದಲ್ಲಿ ಅಂತರಾಷ್ಟ್ರಿಯ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗುತ್ತಿದ್ದು, ಇದಕ್ಕೂ ಶಾಲಾ ಮಕ್ಕಳಿಂದ ಜನಜಾಗೃತಿ ಜಾಥಾ ನಡೆಯಲಿದೆ. ಇದಕ್ಕೆ ಬೇಕಾದ ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಹಾಗೂ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲೂ ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ಬಾಲಕಾರ್ಮಿಕ ಕಾಯ್ದೆ 1986ರ ಕಲಂ 17ರಡಿ ಕಂದಾಯ, ಪಂಚಾಯತ್ ರಾಜ್, ಶಿಕ್ಷಣ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸೇರಿದಂತೆ ಒಟ್ಟು 11 ಇಲಾಖೆಗಳ ಅಧಿಕಾರಿಗಳಿಗೆ ಇನ್ಸ್‌ಪೆಕ್ಟರ್ ಅಧಿಕಾರ ನೀಡಲಾಗಿದೆ. ಈ ಅಧಿಕಾರಿಗಳು ತಾಲೂಕು ಮಟ್ಟದ ಟಾಸ್ಕ್ ಫೋರ್ಸ್ ಹಾಗೂ ಆಕಸ್ಮಿಕ ದಾಳಿಗಳಲ್ಲಿ ಸಕ್ರಿಯವಾಗಿ ಭಾಗವಹಿಸಿ, ತಪ್ಪು ಮಾಡಿದವರ ವಿರುದ್ಧ ಮೊಕದ್ದಮೆ ಹೂಡುವಂತೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ಬಾಲಕಾರ್ಮಿಕತೆಯಿಂದ ಮುಕ್ತಗೊಂಡು ಸರ್ಕಾರಿ ಶಾಲೆಗೆ ದಾಖಲಾದ ಬಡ ಮತ್ತು ವಲಸೆ ಕಾರ್ಮಿಕರ ಮಕ್ಕಳಿಗೆ ಮುಂದಿನ ವಿದ್ಯಾಭ್ಯಾಸಕ್ಕಾಗಿ ಎಸ್‌ಸಿ/ಎಸ್‌ಟಿ/ಬಿಸಿಎಂ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳಲಿ ವಸತಿ ಸೌಲಭ್ಯ ಕಲ್ಪಿಸಬೇಕು ಎಂದು ಕಲ್ಯಾಣ ಇಲಾಖೆಗಳ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸ್ಥಳೀಯ ಕಿರಾಣಿ ಅಂಗಡಿ ಹಾಗೂ ವಿವಿಧ ಉದ್ದಿಮೆಗಳ ಮಾಲೀಕರಿಗೆ ಬಾಲಕಾರ್ಮಿಕ (ನಿಷೇಧ ಹಾಗೂ ನಿಯಂತ್ರಣ) ತಿದ್ದುಪಡಿ ಕಾಯ್ದೆ ಮತ್ತು ಮಕ್ಕಳ ಹಕ್ಕುಗಳ ರಕ್ಷಣೆ ಕುರಿತು ವಿಶೇಷ ಕಾರ್ಯಾಗಾರ ಹಮ್ಮಿಕೊಳ್ಳಬೇಕು.

ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯನ್ನು 2025-26 ನೇ ಸಾಲಿಗೆ ಸಹಕಾರ ಸಂಘಗಳ ನೋಂದಣಿ ಕಾಯ್ದೆಯನ್ವಯ ನವೀಕರಿಸುವ ಕುರಿತು ಹಾಗೂ ಕಾರ್ಮಿಕ ಆಯುಕ್ತರ ನಿರ್ದೇಶನದಂತೆ ಬಾಲಕಾರ್ಮಿಕ ಪದ್ಧತಿ ನಿರ್ಮೂಲನೆಯ ಜಾಗೃತಿ ಕಾರ್ಯಕ್ರಮಗಳಿಗಾಗಿ ಪ್ರಸಿದ್ಧ ಕಂಪನಿಗಳಿದ ಸಿ.ಎಸ್.ಆರ್ ಅನುದಾನ ಮತ್ತು ಗಣ್ಯ ವ್ಯಕ್ತಿಗಳಿಂದ ದೇಣಿಗೆ ಸಂಗ್ರಹ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಹಮ್ಮದ್ ಎನ್.ಝುಬೇರ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಸಹಾಯಕ ಆಯುಕ್ತ ರಾಜೇಶ್ ಹೆಚ್.ಡಿ., ಮಕ್ಕಳ ಕಲ್ಯಾಣ ಸಮಿತಿಯ ಅಧ್ಯಕ್ಷರಾದ ವಿಜಯಲಕ್ಷ್ಮಿ ಮೈದೂರು ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಎಲ್ಲಾ ತಾಲ್ಲೂಕು ತಹಶೀಲ್ದಾರರು ಹಾಜರಿದ್ದರು.



ಡಾ.ಶರಣಪ್ರಕಾಶ್ ಪಾಟೀಲರಿಗೆ ಡಿಸಿಎಂ ಸ್ಥಾನ ನೀಡುವಂತೆ ಮಹಿಳಾ ಘಟಕದಿಂದ ವಿಶೇಷ ಪೂಜೆ

ಸೇಡಂ,ಜೂ.03-

ರಾಜ್ಯದ ಹಿರಿಯ ನಾಯಕರು ಸೇಡಂ ಕ್ಷೇತ್ರದ ಶಾಸಕ ಡಾ.ಶರಣಪ್ರಕಾಶ್ ಪಾಟೀಲ್ ಅವರಿಗೆ ಉಪ ಮುಖ್ಯಮಂತ್ರಿ (ಡಿಸಿಎಂ) ಸ್ಥಾನ ನೀಡುವಂತೆ ಆಗ್ರಹಿಸಿ, ಸೇಡಂ ನಗರದ ಕೊತ್ತಲ ಬಸವೇಶ್ವರ ದೇವಸ್ಥಾನದಲ್ಲಿ ಸೇಡಂ ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕದ ವತಿಯಿಂದ ಮಂಗಳವಾರ ವಿಶೇಷ ಪೂಜೆ ಹಾಗೂ ಪ್ರಾರ್ಥನೆ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಮಹಿಳಾ ಘಟಕದ ಮುಖಂಡರು, ಕಲ್ಯಾಣ ಕರ್ನಾಟಕ ಭಾಗದ ಅಭಿವೃದ್ಧಿಗೆ ಡಾ. ಶರಣಪ್ರಕಾಶ ಪಾಟೀಲ ಅವರು ಮಹತ್ವದ ಕೊಡುಗೆ ನೀಡಿದ್ದಾರೆ. ಸಚಿವರಾಗಿ ಸಮರ್ಥ ಆಡಳಿತ, ಜನಪರ ಯೋಜನೆಗಳು ಹಾಗೂ ಅಭಿವೃದ್ಧಿ ಕಾರ್ಯಗಳ ಮೂಲಕ ಜನರ ವಿಶ್ವಾಸ ಗಳಿಸಿದ್ದಾರೆ ಎಂದು ಹೇಳಿದರು.

ಅವರ ಅನುಭವ, ಪ್ರಾಮಾಣಿಕತೆ ಹಾಗೂ ಕಳಂಕರಹಿತ ರಾಜಕೀಯ ಜೀವನವನ್ನು ಪರಿಗಣಿಸಿ ರಾಜ್ಯ ಸರ್ಕಾರವು ಅವರಿಗೆ ಉಪ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ, ಡಾ. ಶರಣಪ್ರಕಾಶ ಪಾಟೀಲ ಅವರಿಗೆ ಇನ್ನಷ್ಟು ಉನ್ನತ ಸ್ಥಾನಮಾನ ದೊರೆಯಲಿ ಹಾಗೂ ರಾಜ್ಯದ ಅಭಿವೃದ್ಧಿಗೆ ಹೆಚ್ಚಿನ ಸೇವೆ ಸಲ್ಲಿಸುವ ಅವಕಾಶ ಸಿಗಲಿ ಎಂದು ದೇವರಲ್ಲಿ ವಿಶೇಷ ಪ್ರಾರ್ಥನೆ ಸಲ್ಲಿಸಲಾಯಿತು.

ಕಾರ್ಯಕ್ರಮದಲ್ಲಿ ಸೇಡಂ ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಲಲಿತ ಯಾಕಾಪೂರ, ಬಸಮ್ಮ ಪಾಟೀಲ, ಶೋಭಾ ವಾಲಿಕರ್, ನೀರಜಾ ಕುಲಕರ್ಣಿ, ಸಂಧ್ಯಾರಾಣಿ, ಸರೋಜಾ, ರೇಣುಕಾ, ಯಂಕಮ್ಮ, ಮಲ್ಲಮ್ಮ ಪತ್ರಿ, ಮಮತಾ ಮಾಠಪತಿ, ನೀಲಾಬಾಯಿ ರಾಥೋಡ್, ಲಕ್ಷ್ಮೀ ಲೋಕಪಲ್ಲಿ ಸೇರಿದಂತೆ ಮಹಿಳಾ ಘಟಕದ ಪದಾಧಿಕಾರಿಗಳು, ಕಾರ್ಯಕರ್ತೆಯರು ಉಪಸ್ಥಿತರಿದ್ದರು.



ಹೊಸ ಬಂಡಿಹರ್ಲಾಪುರ ಗ್ರಾಮದಲ್ಲಿ ಋತುಚಕ್ರ ನೈರ್ಮಲ್ಯ ದಿನಾಚರಣೆ

ಕೊಪ್ಪಳ ಜೂ.03-

ಪ್ರತಿಯೊಬ್ಬ ಮಹಿಳೆ ಮಾಸಿಕ ಋತುಚಕ್ರ ಸಂದರ್ಭದಲ್ಲಿ ವೈಯಕ್ತಿಕ ಶುಚಿತ್ವಕ್ಕೆ ಆದ್ಯತೆ ನೀಡಿ ಸ್ಯಾನಿಟರಿ ಪ್ಯಾಡ್ ಬಳಕೆಗೆ ಒತ್ತು ನೀಡಬೇಕೆಂದು ಜಿಲ್ಲಾ ಪಂಚಾಯತಿಯ ಸ್ವಚ್ಛ ಭಾರತ ಮಿಷನ್ ಯೋಜನೆಯ ಸ್ಯಾನಿಟೇಷನ್ ಹೈಜಿನ್ ಸಮಾಲೋಚಕಿ ಬಸಮ್ಮ ಹುಡೇದ ಕರೆ ನೀಡಿದರು.

ಬಂಡಿಹರ್ಲಾಪುರ ಗ್ರಾಮ ಪಂಚಾಯತಿ ವತಿಯಿಂದ ಮಂಗಳವಾರ (ಜೂ. 2 ರಂದು) ಗ್ರಾಮ ಪಂಚಾಯತಿಯ ಆವರಣದಲ್ಲಿ ಶಾಲಾ ಮಕ್ಕಳಿಗೆ ಹಮ್ಮಿಕೊಂಡಿದ್ದ ''ಮೇ-28ರ ಋತುಚಕ್ರ ನೈರ್ಮಲ್ಯ ದಿನಾಚರಣೆ'' ಕುರಿತು ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮುಟ್ಟಿನ ಸಮಯದಲ್ಲಿ ಮಾಸಿಕ ಋತುಚಕ್ರ ನಿರ್ವಹಣೆ, ಶುಚಿಯಾದ ಬಟ್ಟೆ ಬಳಕೆ ಹಾಗು ಸ್ಯಾನಿಟರಿ ಪ್ಯಾಡ್ ಬಳಕೆಯಿಂದ ಆಗುವ ಅನುಕೂಲಗಳು, ವೈಯಕ್ತಿಕ ಶುಚಿತ್ವ ಕುರಿತು ಮಹತ್ವದ ಮಾಹಿತಿ ನೀಡಿದರು. ಮಹಿಳೆಯರ ವೈಯಕ್ತಿಕ ಶುಚಿತ್ವ ಹಾಗೂ ಸ್ಯಾನಿಟರಿ ಪ್ಯಾಡ್ಗಳ ಬಳಕೆ ಹಾಗೂ ಬಳಸಿದ ಪ್ಯಾಡ್‌ಗಳನ್ನು ಇನ್ಸಿ ನರೇಟರ್ ಮೂಲಕ ವೈಜ್ಞಾನಿಕ ನಿರ್ವಹಣೆ ಕುರಿತು ಮಾಹಿತಿ ನೀಡಲಾಯಿತು. ಇತ್ತೀಚಿನ ದಿನಗಳಲ್ಲಿ ನಾವು ಆರೋಗ್ಯದ ಬಗ್ಗೆ ನಾವು ಕಾಳಜಿವಹಿಸದೇ ಇರುವದರಿಂದ ಅನಾರೋಗ್ಯಕ್ಕೆ ಒಳಗಾಗುತ್ತಿದ್ದೆವೆ. ಮುಟ್ಟನ್ನು ಗುಟ್ಟನ್ನಾಗಿಸದೇ ಮುಟ್ಟನ್ನು ಒಗ್ಗೂಡಿಕೊಂಡು ಆರೋಗ್ಯದ ಬದಲಾವಣೆಗೆ ಮುನ್ನುಡಿ ಬರೆಯೋಣ ಎಂದು ಕರೆ ನೀಡಿದರು.

ಮಹಿಳೆಯರು ಋತುಚಕ್ರ ಸಂದರ್ಭದಲ್ಲಿ ವೈಯಕ್ತಿಕ ಶುಚಿತ್ವಕ್ಕೆ ಹೆಚ್ಚಿನ ಆದ್ಯತೆ ನೀಡಲು ಪ್ರತಿ ಗ್ರಾಮ ಪಂಚಾಯತಿಯಲ್ಲಿ ಬಳಕೆಯಾದ ಪ್ಯಾಡ್ಗಳನ್ನು ಸಂಗ್ರಹಿಸಿ ವೈಜ್ಞಾನಿಕ ನಿರ್ವಹಣೆ ಮಾಡಲು ಇನ್ಸಿ ನರೇಟರ್ ಅಳವಡಿಸಲಾಗುತ್ತಿದ್ದು ಎಲ್ಲಾ ಮಹಿಳೆಯರು ಅವುಗಳಿಗೆ ನೀಡಬೇಕು. ಎಲ್ಲಿ ಬೇಕಾದಲ್ಲಿ ಬಿಸಾ ಡದೇ ಗ್ರಾ. ಪಂ. ವಾಹನಕ್ಕೆ ನೀಡಬೇಕು ಅಥವಾ ನಿಗದಿಪಡಿಸಿದ ಸ್ಥಳದಲ್ಲಿ ಅವುಗಳನ್ನು ವಿಲೇವಾರಿ ಮಾಡಬೇಕು. ಬಯಲು ಶೌಚಕ್ಕೆ ಹೋಗುವದರಿಂದ ಅನೇಕ ರೋಗಗಳು ಹರಡುವ ಸಾಧ್ಯತೆ ಶೇ.80 ರಷ್ಟು ಇರುತ್ತದೆ. ಹಸಿ ಕಸ ಮತ್ತು ಒಣ ಕಸ ಪ್ರತ್ಯೇಕಿಸಿ ವಾಹನಕ್ಕೆ ನೀಡಬೇಕೆಂದು ಕರೆ ನೀಡಿದರು.

ಪಂಚಾಯತ ಅಭಿವೃದ್ಧಿ ಅಧಿಕಾರಿ ಅಶೋಕ ರಾಂಪುರ ಅವರು ಮಾತನಾಡಿ, ಮಹಿಳೆಯರಿಗೆ ವೈಯಕ್ತಿಕ ಶುಚಿತ್ವ ಎನ್ನುವದು ಆರೋಗ್ಯದ ಮೂಲಕ ಬುನಾದಿ. ಹಾಗಾಗಿ ಮಹಿಳೆಯರು ಸ್ವಚ್ಛತೆಗೆ ಹಾಗು ಶುಚಿತ್ವಕ್ಕೆ ಆದ್ಯತೆ ನೀಡಬೇಕೆಂದು ಕರೆ ನೀಡಿದರು.

ಮುಂಗಾರು ಹಂಗಾಮು ಸಿದ್ಧತೆ: ಬಳ್ಳಾರಿ ಜಿಲ್ಲೆಯಲ್ಲಿ ಚುರುಕುಗೊಂಡ ಕೃಷಿ ಚಟುವಟಿಕೆಗಳು

ಸಹಾಯಧನದಲ್ಲಿ ಬಿತ್ತನೆ ಬೀಜ ವಿತರಣೆಗೆ ಕೃಷಿ ಇಲಾಖೆ ಸಜ್ಜು





ಳ್ಳಾರಿ,ಜೂ.03-

ಜಿಲ್ಲೆಯಲ್ಲಿ ಮುಂಗಾರು ಪೂರ್ವದಲ್ಲಿ ಹಲವೆಡೆ ಉತ್ತಮ ಮಳೆಯಾಗುತ್ತಿರುವುದರಿಂದ ಕೃಷಿ ಚಟುವಟಿಕೆಗಳು ಸಾಗರೋತ್ತರ ವೇಗವನ್ನು ಪಡೆದುಕೊಂಡಿದ್ದು, ರೈತ ಸಮುದಾಯದಲ್ಲಿ ಮಂದಹಾಸ ಮೂಡಿಸಿದೆ. ಪ್ರಸ್ತುತ ಲಭ್ಯವಿರುವ ಉತ್ತಮ ಮಳೆಯ ಹಿನ್ನೆಲೆಯಲ್ಲಿ ಜಿಲ್ಲೆಯ ರೈತರು ತಮ್ಮ ಕೃಷಿ ಭೂಮಿಯನ್ನು ಹದಗೊಳಿಸುವ ಕಾರ್ಯಗಳಲ್ಲಿ ಬಿಡುವಿಲ್ಲದೆ ತೊಡಗಿಸಿಕೊಂಡಿದ್ದಾರೆ. ರಂಟೆ-ಕುಟೆ ಹೊಡೆಯುವುದು, ರೋಟವೇಟರ್ ಹಾಗೂ ಎತ್ತುಗಳ ನೇಗಿಲು ಬಳಸಿ ಭೂಮಿಯನ್ನು ಹದಗೊಳಿಸುವ ದೃಶ್ಯಗಳು ಜಿಲ್ಲೆಯಾದ್ಯಂತ ಸಾಮಾನ್ಯವಾಗುತ್ತಿವೆ.

ಜಿಲ್ಲೆಯ ವಾರ್ಷಿಕ ವಾಡಿಕೆ ಮಳೆಯು 599.0 ಮಿ.ಮೀ ಆಗಿರುತ್ತದೆ. ಮೇ 31ರ ಅಂತ್ಯಕ್ಕೆ ಸರಾಸರಿ ವಾಡಿಕೆ ಮಳೆಯು 74.4 ಮಿ.ಮೀ ಇರಬೇಕಾಗಿದ್ದು, ಪ್ರಸ್ತುತ 72.4 ಮಿ.ಮೀ ನಷ್ಟು ಉತ್ತಮ ಮಳೆಯಾಗಿರುತ್ತದೆ ಎಂದು ಜಂಟಿ ಕೃಷಿ ನಿರ್ದೇಶಕ ಟಿ. ಸೋಮಸುಂದರ್ ಅವರು ತಿಳಿಸಿದ್ದಾರೆ.

1.59 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಗುರಿ:

ಪ್ರಸ್ತಕ ಸಾಲಿನ ಮುಂಗಾರು ಹಂಗಾಮಿಗೆ ಜಿಲ್ಲೆಯಲ್ಲಿ ಒಟ್ಟು 1,59,546 ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ಮಾಡುವ ಗುರಿಯನ್ನು ಹೊಂದಲಾಗಿದೆ. ಪ್ರಮುಖ ಬೆಳೆಗಳ ನಿರೀಕ್ಷಿತ ಬಿತ್ತನೆ ವಿಸ್ತೀರ್ಣದ ವಿವರ ಹೀಗಿದೆ.

ಭತ್ತ- 87,741 ಹೆಕ್ಟೇರ್, ಮೆಕ್ಕಜೋಳ-26,000 ಹೆಕ್ಟೇರ್ ಹತ್ತಿ- 20,000 ಹೆಕ್ಟೇರ್ ಸಜ್ಜೆ- 10,000 ಹೆಕ್ಟೇರ್ ತೊಗರಿ- 7,224 ಹೆಕ್ಟೇರ್ ತೃಣಧಾನ್ಯಗಳು- 2,508 ಹೆಕ್ಟೇರ್, ಶೇಂಗಾ (ನೆಲಕಡಲೆ)- 1,500 ಹೆಕ್ಟೇರ್ ಸೂರ್ಯಕಾಂತಿ- 1,200 ಹೆಕ್ಟೇರ್, ಕಬ್ಬು- 800 ಹೆಕ್ಟೇರ್

★15 ಕೇಂದ್ರಗಳ ಮೂಲಕ ರಿಯಾಯಿತಿ ದರದಲ್ಲಿ ಬೀಜ ವಿತರಣೆ:★

ರೈತರ ಕೃಷಿ ಚಟುವಟಿಕೆಗಳಿಗೆ ಪೂರಕವಾಗಿ ಕೃಷಿ ಇಲಾಖೆಯು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಪೂರೈಸಲು ಸಂಪೂರ್ಣ ಸಜ್ಜಾಗಿದೆ. ಜಿಲ್ಲೆಯ 13 ರೈತ ಸಂಪರ್ಕ ಕೇಂದ್ರಗಳು ಮತ್ತು 02 ಹೆಚ್ಚುವರಿ ಕೇಂದ್ರಗಳು ಸೇರಿದಂತೆ ಒಟ್ಟು 15 ಕೇಂದ್ರಗಳ ಮೂಲಕ ವಿವಿಧ ಬೆಳೆಗಳ ಬಿತ್ತನೆ ಬೀಜಗಳನ್ನು ಸಹಾಯಧನದಲ್ಲಿ ವಿತರಿಸಲು ವ್ಯವಸ್ಥೆ ಮಾಡಿಕೊಳ್ಳಲಾಗಿದೆ. ಜಿಲ್ಲೆಗೆ ಮುಂಗಾರು ಹಂಗಾಮಿನಲ್ಲಿ ಒಟ್ಟು 7,115 ಕ್ವಿಂಟಾಲ್ ಬಿತ್ತನೆ ಬೀಜದ ಬೇಡಿಕೆ ಇದ್ದು, ಸದ್ಯ 10,415 ಕ್ವಿಂಟಾಲ್‌ನಷ್ಟು ದೊಡ್ಡ ಪ್ರಮಾಣದ ದಾಸ್ತಾನು ಲಭ್ಯವಿದೆ.

★ಬಿತ್ತನೆ ಬೀಜಗಳ ಬೇಡಿಕೆ ಮತ್ತು ದಾಸ್ತಾನು ವಿವರ (ಕ್ವಿಂ. ಗಳಲ್ಲಿ):★

ಭತ್ತ: 2,003 ಕ್ವಿಂ(ಬೇಡಿಕೆ), 3,000 ಕ್ವಿಂ(ದಾಸ್ತಾನು).

ಮೆಕ್ಕಜೋಳ: 2,493 ಕ್ವಿಂ(ಬೇಡಿಕೆ), 3,000 ಕ್ವಿಂ(ದಾಸ್ತಾನು).

ತೊಗರಿ: 477 ಕ್ವಿಂ(ಬೇಡಿಕೆ), 1,000 ಕ್ವಿಂ(ದಾಸ್ತಾನು).

ನೆಲಕಡಲೆ: 1,770 ಕ್ವಿಂ(ಬೇಡಿಕೆ), 2,900 ಕ್ವಿಂ(ದಾಸ್ತಾನು).

ಜೋಳ: 96 ಕ್ವಿಂ(ಬೇಡಿಕೆ), 150 ಕ್ವಿಂ(ದಾಸ್ತಾನು).

ಇತರೆ: 276 ಕ್ವಿಂ(ಬೇಡಿಕೆ), 365 ಕ್ವಿಂ(ದಾಸ್ತಾನು).

ಒಟ್ಟು: 7,115 ಕ್ವಿಂ(ಬೇಡಿಕೆ), 10,415 ಕ್ವಿಂ(ದಾಸ್ತಾನು).

ರೈತ ಬಾಂಧವರು ಕೇವಲ ಮಣ್ಣಿನಲ್ಲಿ ಅವಶ್ಯಕ ತೇವಾಂಶ ಲಭ್ಯವಿದ್ದಾಗ ಹಾಗೂ ಮುಂದಿನ 3-4 ದಿನಗಳಲ್ಲಿ ಮಳೆ ಬರುವ ಮುನ್ಸೂಚನೆ ಇರುವ ಸಂಭವವಿದ್ದಲ್ಲಿ ಮಾತ್ರ ಬಿತ್ತನೆಗೆ ಮುಂದಾಗಬೇಕು ಎಂದು ಅವರು ಕೋರಿದ್ದಾರೆ.

★ಸಮರ್ಪಕ ರಸಗೊಬ್ಬರ ದಾಸ್ತಾನು; ಎಫ್‌ಐಡಿ ಮೂಲಕ ಯೂರಿಯಾ ವಿತರಣೆ: ಜಿಲ್ಲೆಯಲ್ಲಿ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ದಾಸ್ತಾನು ಸಮರ್ಪಕವಾಗಿದೆ. ಮುಂಗಾರು ಹಂಗಾಮಿಗೆ ಒಟ್ಟು 1,03,778 ಮೆಟ್ರಿಕ್ ಟನ್ ರಸಗೊಬ್ಬರ ಬೇಡಿಕೆಯಿದ್ದು, ಸದ್ಯ 47,533.23 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನಿರುತ್ತದೆ.

ಪಾಶ್ಚಾತ್ಯ ದೇಶಗಳಲ್ಲಿ ನಡೆಯುತ್ತಿರುವ ಯುದ್ಧದ ಹಿನ್ನೆಲೆಯಲ್ಲಿ ಮುಂಬರುವ ದಿನಗಳಲ್ಲಿ ರಸಗೊಬ್ಬರದ ಪೂರೈಕೆಯಲ್ಲಿ ಸ್ವಲ್ಪ ಮಟ್ಟಿನ ಏರುಪೇರಾಗುವ ಸಂಭವವಿರುತ್ತದೆ. ಇದನ್ನು ಗಮನದಲ್ಲಿಟ್ಟುಕೊಂಡು ಎಲ್ಲಾ ರೈತರಿಗೆ ಯೂರಿಯಾ ರಸಗೊಬ್ಬರವನ್ನು ಸಮರ್ಪಕವಾಗಿ ಒದಗಿಸಲು ಹಾಗೂ ಕಾಳಸಂತೆಯಲ್ಲಿ ಮಾರಾಟವಾಗುವುದನ್ನು ತಡೆಗಟ್ಟಲು ಸರ್ಕಾರದ ಆದೇಶದನ್ವಯ ಯೂರಿಯಾವನ್ನು ಕಡ್ಡಾಯವಾಗಿ ಎಫ್‌ಐಡಿ (ಫಾರ್ಮರ್ ಐಡಿ) ಮೂಲಕವೇ ವಿತರಿಸಲಾಗುವುದು.

ಅಲ್ಲದೆ, ರೈತರು ಕೇವಲ ಯೂರಿಯಾ ರಸಗೊಬ್ಬರ ಒಂದನ್ನೇ ಅವಲಂಬಿಸದೆ ಸಾರಜನಕ ಒದಗಿಸುವ ಇತರೆ ರಸಗೊಬ್ಬರಗಳಾದ ಕಾಂಪ್ಲೆಕ್ಸ್ ಗೊಬ್ಬರಗಳು, ನ್ಯಾನೋ ಯೂರಿಯಾ ಹಾಗೂ ನ್ಯಾನೋ ಡಿ.ಎ.ಪಿ ಗಳನ್ನೂ ಸಹ ಬಳಸಬೇಕೆಂದು ಜಂಟಿ ಕೃಷಿ ನಿರ್ದೇಶಕರು ಮನವಿ ಮಾಡಿದ್ದಾರೆ.

★ರಸಗೊಬ್ಬರ ಬೇಡಿಕೆ (ಏಪ್ರಿಲ್ 2026 ರಿಂದ ಸೆಪ್ಟೆಂಬರ್ 2026 ರವರೆಗೆ) ಮತ್ತು ದಾಸ್ತಾನು ವಿವರ (ಮೇ 31 2026 ರವರೆಗೆ) (ಮೆಟ್ರಿಕ್ ಟನ್‌ಗಳಲ್ಲಿ):★

ಡಿ.ಎ.ಪಿ: 13,915(ಬೇಡಿಕೆ), 6,093.72(ದಾಸ್ತಾನು).

ಎಂ.ಒ.ಪಿ: 3,567(ಬೇಡಿಕೆ), 2,156.10(ದಾಸ್ತಾನು).

ಕಾಂಪ್ಲೆಕ್ಸ್: 50,554(ಬೇಡಿಕೆ), 25,029.54(ದಾಸ್ತಾನು).

ಯೂರಿಯಾ: 34,641(ಬೇಡಿಕೆ), 13,633.40(ದಾಸ್ತಾನು)

ಎಸ್.ಎಸ್.ಪಿ/ಇತರೆ: 1,101(ಬೇಡಿಕೆ), 599.52(ದಾಸ್ತಾನು)

ಒಟ್ಟು: 1,03,778(ಬೇಡಿಕೆ), 47,533.23(ದಾಸ್ತಾನು).

★ಅಕ್ರಮ ತಡೆಗೆ ಕಟ್ಟುನಿಟ್ಟಿನ ನಿಗಾ:★

ಜಿಲ್ಲೆಯಲ್ಲಿ ಕೃಷಿ ಪರಿಕರಗಳ ಪರಿವೀಕ್ಷಕರ ವಿಶೇಷ ತಂಡಗಳನ್ನು ರಚಿಸಲಾಗಿದ್ದು, ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳ ಗುಣಮಟ್ಟ ಮತ್ತು ಬೆಲೆ ನಿಯಂತ್ರಣದ ಮೇಲೆ ಕಟ್ಟುನಿಟ್ಟಿನ ನಿಗಾ ಇರಿಸಲಾಗಿದೆ.

ಖಾಸಗಿ ಕೃಷಿ ಪರಿಕರ ಮಾರಾಟಗಾರರು ಕಡ್ಡಾಯವಾಗಿ ಗುಣಮಟ್ಟದ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಕೀಟನಾಶಕಗಳನ್ನೇ ಮಾರಾಟ ಮಾಡಬೇಕು ಹಾಗೂ ಯೂರಿಯಾವನ್ನು ಎಫ್‌ಐಡಿ ಮೂಲಕವೇ ವಿತರಿಸಬೇಕು. ನಿಯಮ ಉಲ್ಲಂಘಿಸಿ ಕಾಳಸಂತೆ ಅಥವಾ ಹೆಚ್ಚಿನ ಬೆಲೆಗೆ ಮಾರಾಟ ಮಾಡಲು ಯತ್ನಿಸಿದರೆ ಕಾನೂನು ರೀತ್ಯಾ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಎಚ್ಚರಿಸಿದ್ದಾರೆ.

ರೈತರು ಸಹ ಯಾವುದೇ ಅನಧಿಕೃತ ಮೂಲಗಳಿಂದ ಪರಿಕರಗಳನ್ನು ಖರೀದಿಸದೇ, ಕೇವಲ ಅಧಿಕೃತ ಪರಿಕರ ಮಾರಾಟಗಾರರಿಂದಲೇ ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಖರೀದಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ಕೋರಿದ್ದಾರೆ.

ಸಾಂತ್ವನ ಸಹಾಯವಾಣಿ ಕೇಂದ್ರಕ್ಕೆ ಶಿಶು ಅಭಿವೃದ್ಧಿ ಕಚೇರಿಯ ಹಿರಿಯ ಮೇಲ್ವಿಚಾರಕಿ ಭೇಟಿ

ಅಫಜಲಪುರ ,ಜೂ.02-

ವ್ಹಿಕೆಜಿ ಸಾಂತ್ವನ ಸಹಾಯವಾಣಿ ಕೇಂದ್ರ, ಅಫಜಲಪುರಕ್ಕೆ ಶಿಶು ಅಭಿವೃದ್ಧಿ ಕಚೇರಿ ಹಿರಿಯ ಮೇಲ್ವಿಚಾರಕಿ ಶಿವಲೀಲಾ ಡೆಂಗಿ ಅವರು ಜೂ.1ರಂದು ಭೇಟಿ ನೀಡಿ ಕೇಂದ್ರದ ಕಾರ್ಯಚಟುವಟಿಕೆಗಳ ಕುರಿತು ಮಾಹಿತಿ ಪಡೆದುಕೊಂಡರು.

ಈ ಸಂದರ್ಭದಲ್ಲಿ ಕೇಂದ್ರದಲ್ಲಿ ದಾಖಲಾಗಿರುವ ದೂರುಗಳು, ಅವುಗಳ ನಿರ್ವಹಣೆ ಹಾಗೂ ಸಂತ್ರಸ್ತರಿಗೆ ನೀಡಲಾಗುತ್ತಿರುವ ನೆರವು, ಮಾರ್ಗದರ್ಶನ ಮತ್ತು ಸಮಾಲೋಚನಾ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು.

ಸಹಾಯವಾಣಿ ಕೇಂದ್ರವು ಮಹಿಳೆಯರು, ಮಕ್ಕಳು ಹಾಗೂ ಸಂಕಷ್ಟದಲ್ಲಿರುವ ವ್ಯಕ್ತಿಗಳಿಗೆ ತುರ್ತು ಸಹಾಯ, ರಕ್ಷಣೆ ಮತ್ತು ಅಗತ್ಯ



ಸಲಹೆಗಳನ್ನು ನೀಡುವ ಮೂಲಕ ಸಮಾಜದಲ್ಲಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಅವರು ಅಭಿಪ್ರಾಯಪಟ್ಟರು.

ಭೇಟಿಯ ವೇಳೆ ಕೇಂದ್ರದ ಕಾರ್ಯದರ್ಶಿ ಎಸ್.ಬಿ.ಅವಟೆ, ಆಪ್ತ ಸಮಾಲೋಚಕರಾದ ಬಸೀರಾ ಗೊಟ್ಯಾಳ ಹಾಗೂ ಸಮಾಜ ಕಾರ್ಯಕರ್ತೆಯರು ಉಪಸ್ಥಿತರಿದ್ದು, ಕೇಂದ್ರದ ಕಾರ್ಯವೈಖರಿ, ಸಾರ್ವಜನಿಕರಿಗೆ ನೀಡಲಾಗುತ್ತಿರುವ ಸೇವೆಗಳು ಹಾಗೂ ದೂರುಗಳ ವಿಲೇವಾರಿ ಕುರಿತು ವಿವರಿಸಿದರು.

ಅಧಿಕಾರಿಗಳು ಕೇಂದ್ರದ ಕಾರ್ಯನಿರ್ವಹಣೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಮುಂದೆಯೂ ಇದೇ ರೀತಿಯ ಜನಪರ ಸೇವೆಯನ್ನು ಪರಿಣಾಮಕಾರಿಯಾಗಿ ಮುಂದುವರಿಸುವಂತೆ ಸಲಹೆ ನೀಡಿದರು.

ಗುರು-ಶಿಷ್ಯರ ಸಂಬಂಧ ಅತ್ಯಂತ ಪವಿತ್ರ : ವಿಶ್ವರಾಧ್ಯ ಶ್ರೀ

ಅಫಜಲಪುರ,ಜೂ.03-

ಗುರು-ಶಿಷ್ಯರ ಸಂಬಂಧ ಅತ್ಯಂತ ಪವಿತ್ರವಾಗಿದ್ದು, ಜೀವನದಲ್ಲಿ ಉನ್ನತ ಸ್ಥಾನಕ್ಕೇರಿದ ನಂತರವೂ ತಮ್ಮನ್ನು ತಿದ್ದಿ-ತೀಡಿ ಉತ್ತಮ ವ್ಯಕ್ತಿತ್ವ ರೂಪಿಸಿದ ಗುರುಗಳನ್ನು ಸ್ಮರಿಸಿ ಗೌರವಿಸುವುದು ಭಾರತೀಯ ಸಂಸ್ಕೃತಿಯ ಶ್ರೇಷ್ಠ ಪರಂಪರೆಯಾಗಿದೆ ಎಂದು ವಿಶ್ವರಾಧ್ಯ ಮಳೇಂದ್ರ ಶಿವಾಚಾರ್ಯರು ಹೇಳಿದರು. ಪಟ್ಟಣದ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಗುರುಭವ ನದಲ್ಲಿ 1997-98ನೇ ಸಾಲಿನ ಎಸ್ ಎಸ್‌ಎಲ್‌ಸಿ ಹಳೆಯ ವಿದ್ಯಾರ್ಥಿಗಳ ವತಿಯಿಂದ ಆಯೋಜಿಸಲಾದ ಗುರುವಂದನೆ ಹಾಗೂ ಸ್ನೇಹ ಸಮ್ಮಿಲನ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ ದರು.

27 ವರ್ಷಗಳ ಬಳಿಕವೂ ತಮ್ಮ ಗುರುಗಳನ್ನು ಸ್ಮರಿಸಿ, ಅವರಿಗೆ



ಕೃತಜ್ಞತೆ ಸಲ್ಲಿಸಲು ಒಂದೇ ವೇದಿಕೆಯಲ್ಲಿ ಸೇರಿರುವ ಹಳೆಯ ವಿದ್ಯಾರ್ಥಿಗಳ ಕಾರ್ಯ ಶ್ಲಾಘನೀಯವಾಗಿದೆ. ಜೀವನದಲ್ಲಿ ಯಶಸ್ಸು ಗಳಿಸಿದ ಬಳಿಕ ತಮ್ಮ ಬೇರುಗಳನ್ನು, ಕಲಿತ ಶಾಲೆಯನ್ನು ಹಾಗೂ ಪಾಠ ಹೇಳಿದ ಗುರುಗಳನ್ನು ನೆನಪಿಸಿಕೊಳ್ಳುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಕರ್ತವ್ಯವಾಗಿದೆ. ವಿದ್ಯೆ ನೀಡಿದ ಗುರುಗಳನ್ನು ಮರೆಯದಿರುವುದು ಭಾರತೀಯ ಸಂಸ್ಕೃತಿಯ ಪ್ರತೀಕವಾಗಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಸಾನ್ನಿಧ್ಯವನ್ನು ಜಯ ಗುರುಶಾಂತಲಿಂಗಾರಾಧ್ಯ ಶಿವಾಚಾರ್ಯರು ವಹಿಸಿ ಆಶೀರ್ವಚನ ನೀಡಿದರು.

ಈ ಸಂದರ್ಭದಲ್ಲಿ ಶಿಕ್ಷಕರಾದ ಶಾಮಾಚಾರ್ಯ, ಗುರುಸಿದ್ದಯ್ಯ ಹಿರೇಮಠ, ಎನ್.ಜಿ. ದೇಗಾಂವ, ಸಿದ್ರಾಮಯ್ಯ ಮಠ, ಎಸ್.ಎಂ. ಕಾಮಗೊಂಡ, ಎಸ್.ಎಸ್. ದೇವೂರ, ಮುನೀರ್ ಪಟೇಲ್, ಆರ್.ಜಿ. ದೇಸಾಯಿ, ಶೇಖಪ್ಪ ಜೋಗೂರು, ಮಲ್ಲಿಕಾರ್ಜುನ ಸಿಂದಗಿ, ಮಹಾಂತಪ್ಪ ಬಟವಾಳ, ಜಲಾಲ್, ಭಾಸ್ಕರ ಕುಂಬಾರ ಹಾಗೂ ಹಣಮಂತ ಅವಟೆ ಅವರನ್ನು ಹಳೆಯ ವಿದ್ಯಾರ್ಥಿಗಳು ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ರಾಜಶೇಖರ ಜೋಗೂರು, ರಾಘವೇಂದ್ರ ಚಿನಿವಾರ, ಗುಂಡು ಅಂಬೂರೆ, ಸಿದ್ದರಾಮು ರಾಣೆ, ಭೀಮಾಶಂಕರ ಪತ್ತಾರ, ಅನೀಲ ಸಿಂಪಿ, ಚಂದ್ರಕಾಂತ ಸಿಂಗೆ, ಶಿವಾನಂದ ಅವಟೆ, ಬೋಗಪ್ಪ ಆಸಂಗಿಹಾಳ, ಗಾಯತ್ರಿ ಮಹಾಮನಿ, ವಿದ್ಯಾ ನಾಟೀಕಾರ, ಅನುರಾಧಾ ಪೊಟ್ಟೋಡೆ, ಪ್ರೀತಿ ಆಲಮೇಲಕರ, ಗೀತಾ ಬಯಾಸ, ಸುಶೀಲ ಅಗ್ನಿಹೋತ್ರಿ, ಗಂಗಾ ಪಾಟೀಲ ಸೇರಿದಂತೆ 1997-98ನೇ ಸಾಲಿನ ಹಳೆಯ ವಿದ್ಯಾರ್ಥಿಗಳು ಹಾಗೂ ಅನೇಕ ಗಣ್ಯರು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ಜ್ಯೋತಿ ಬಳ್ಳಾರಿ ಸಹಾಯರ್ಥವಾಗಿ ನಡೆದ ಜನರ ಮನಸ್ಸು ಸೂರೆಗೊಂಡ ನಾಟಕ ಮತ್ತು ನೃತ್ಯ ಕಾರ್ಯಕ್ರಮ

ಕಲಾವಿದರು ಅವರು ತಮ್ಮ ಕಲೆಯನ್ನು ಪ್ರದರ್ಶನ ಮಾಡಬೇಕಾದರೆ ಕಲಾಭಿಮಾನಿಗಳು ಹೆಚ್ಚು ಪ್ರೋತ್ಸಾ ನೀಡಬೇಕು ಆರ್‌ಸಿಬಿಯ ಅಂತಿಮ ಕ್ರಿಕೆಟ್ ಮ್ಯಾಚ್ ನಡೆದಿದೆ .ಆದರೂ ಇದರ ಮಧ್ಯದಲ್ಲಿ ಇಷ್ಟು ಜನ ಪ್ರೇಕ್ಷಕರ ರೂಪದಲ್ಲಿ ತಾವು ಬಂದು ಕಲಾವಿದರಿಗೆ ಪ್ರೋತ್ಸಾ ನೀಡುವಂತ ಕೆಲಸವನ್ನು ಮಾಡುತ್ತಿದ್ದೀರಿ ವಿಶೇಷವಾಗಿ ಮಹಾಂತೇಶ್ ಪಾಟೀಲ್ ಅತ್ತು ನೂರು ಒಬ್ಬ ರಂಗಭೂಮಿಯ ಕಲಾವಿದರಾಗಿದ್ದು ಹಲವಾರು ರಂಗ ಭೂಮಿಯ ಕಲಾವಿದರಿಗೆ ಎಲ್ಲ ರೀತಿಯ ಸಹಾಯ ಮಾಡುವಂತಹ ಮನೋಭಾವನೆಯನ್ನು ಇಟ್ಟುಕೊಂಡಿದ್ದಾರೆ ವೇದಿಕೆಯಲ್ಲಿ ಇರುವ ಮಹನೀಯರ ಸಹ ಇವತ್ತು ಜ್ಯೋತಿ ಬಳ್ಳಾರಿ ಅವರ ಹಾಕಿಕೊಂಡು ಕಾರ್ಯಕ್ರಮಕ್ಕೆ ತನು ಮನ ಧನ ಸಹಾಯ ಮಾಡುವುದರ ಮೂಲಕ ಅವರ ಕಾರ್ಯಕ್ರಮಕ್ಕೆ ಎಲ್ಲರೂ ಬೆಂಬಲಿಸಬೇಕೆಂದು ಹೇಳಿದರು ನಂತರ ಸಂಜು ಬಸಯ್ಯ ಪಲ್ಲವಿ ದಿವ್ಯ ಮಂಜು ಗುಳೇದಗುಡ್ಡವರ ನಾಟಕದ ದೃಶ್ಯಗಳು ಜನರನ್ನು ನಗೆಗಡಲಿಗೆ ಕೊಂಡ ಹೊಯ್ದವು ವಿಶೇಷವಾಗಿ ಜ್ಯೋತಿ ಬಳ್ಳಾರಿಯವರ ಆಕರ್ಷಣಿವಾದ ನೃತ್ಯವು ಪ್ರೇಕ್ಷಕರಿಂದ ಚಪ್ಪಾಳೆಯನ್ನು ಗಿಟ್ಟಿಸಿಕೊಳ್ಳುವಲ್ಲಿ ಯಶಸ್ವಿಯಾಯಿತು. ಕಾರ್ಯಕ್ರಮವನ್ನ ಸುರೇಶ್ ಅಮ್ರ ನಿರೂಪಣೆ ಮಾಡಿದರ. ಸಂಚಾಲಕರಾದ ಸಂತೋಷ್ ಬಳ್ಳಾರಿಯವರು ಸ್ವಾಗತಿಸಿ ಕೊನೆಯಲ್ಲಿ ವಂದಿಸಿದರು. ಈ ಸಂದರ್ಭದಲ್ಲಿ ಅಖಿಲ ಭಾರತ ವೀರಶೈವ ಮಹಾಸಭಾ ಅಧ್ಯಕ್ಷರ ಚಂದ್ರಶೇಖರ ಪಾಟೀಲ್ ಮಿರ್ಜಾಪುರ್ ಕನ್ನಡ ಜಾನಪದ ಪರಿಷತ್ತಿನ ವಿಭಾಗಿಯ ಸಂಚಾಲಕರಾದ ಡಾ. ಶರಣಪ್ಪ ಗೋನಾಳ್ .ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಮಹಿಳಾ ಪ್ರತಿನಿಧಿ ಡಾ. ಶಾಂತಾ ಕುಲಕರ್ಣಿ ಕನ್ನಡಪರ ಸಂಘಟನೆಯ ಕರವೇ ಅಧ್ಯಕ್ಷರಾದ ಅಶೋಕ್ ಕುಮಾರ್ ಜೈನ್ ಸಮಾಜಸೇವಕರಾದ ಗೋಪಾಲಯ್ಯ. ವೀರೇಂದ್ರ ಪಾಟೀಲ್ ಉದ್ಯಮದಾರರು. ಕಾಂಗ್ರೆಸ್ ಮಹಿಳಾ ಘಟಕದ ರಾಜ್ಯ ಪ್ರಧಾನ ಕಾರ್ಯದರ್ಶಿಯಾದ ಡಾ. ನಾಗವೇಣಿ ಪಾಟೀಲ್. ರಾಜಪ್ಪ ಬಡಿಗೇರ್ ಅಂಬಾ ಭವಾನಿ ಸೇರದಂತೆ ಇನ್ನಿತರರು ಉಪಸ್ಥಿತರಿದ್ದರು.

ಪ್ರವಾಹ ಪೀಡಿತ ಪ್ರದೇಶಗಳ ಮೇಲೆ ನಿಗಾ ವಹಿಸಿ : ಡಿಸಿ ಇಕ್ರಮ್ ಶರೀಫ್



ಕಲಬುರಗಿ,ಜೂ.03-

ಮುಂಗಾರು ಮಳೆ ಆರಂಭವಾಗುತ್ತಿದ್ದಂತೆಯೇ ಜಿಲ್ಲೆಯಾದ್ಯಂತ ಬಿತ್ತನೆ ಚಟುವಟಿಕೆಗಳು ಗರಿಗೆದರಲಿರುವ ಹಿನ್ನೆಲೆಯಲ್ಲಿ ಕೃಷಿ ಸೇರಿದಂತೆ ಸಂಬಂಧಿತ ಎಲ್ಲಾ ಇಲಾಖೆಗಳು ಪೂರ್ವಸಿದ್ಧತೆಗಳನ್ನು ಸಮರ್ಪಕವಾಗಿ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷ ಇಕ್ರಮ್ ಶರೀಫ್ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಂಗಾರು ಮಳೆ ಅವಧಿಯ ಪೂರ್ವ ಸಿದ್ಧತೆ ಹಾಗೂ ಮುಂಜಾಗ್ರತಾ ಕ್ರಮಗಳ ಕುರಿತು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಜೂನ್ ತಿಂಗಳಲ್ಲಿ ಸುರಿದ ಮಳೆಯಿಂದ ತೋಟಗಾರಿಕೆ ಇಲಾಖೆಯಿಂದ 45 ಹೆಕ್ಟೇರ್ ಬೆಳೆ ಹಾನಿ ವರದಿ ಸಲ್ಲಿಕೆಯಾಗಿದ್ದು, ಕೃಷಿ ಇಲಾಖೆಯು ಕೂಡ ತಕ್ಷಣ ಸರ್ವೆ ನಡೆಸಿ ವರದಿ ಸಲ್ಲಿಸಬೇಕೆಂದು ಸೂಚಿಸಿದರು.

ಜಿಲ್ಲೆಯಲ್ಲಿ ಪ್ರಸ್ತುತ 11,634 ಮೆಟ್ರಿಕ್ ಟನ್ ಯೂರಿಯಾ, 9,583 ಮೆಟ್ರಿಕ್ ಟನ್ ಡಿಎಪಿ, 13,990 ಮೆಟ್ರಿಕ್ ಟನ್ ಕಾಂಪ್ಲೆಕ್ಸ್ ಸೇರಿದಂತೆ ಒಟ್ಟು 38,351 ಮೆಟ್ರಿಕ್ ಟನ್ ರಸಗೊಬ್ಬರ ದಾಸ್ತಾನು ಇದೆ. ಇದರಲ್ಲಿ ಈಗಾಗಲೇ 5ರಿಂದ 6 ಸಾವಿರ ಮೆಟ್ರಿಕ್ ಟನ್ ರಸಗೊಬ್ಬರ ವಿತರಣೆ ಮಾಡಲಾಗಿದೆ. ಇನ್ನೂ ಸಮರ್ಪಕ ಮಳೆಯಾಗದ ಹಿನ್ನೆಲೆಯಲ್ಲಿ ರೈತರು ತುರ್ತು ಬಿತ್ತನೆಗೆ ಮುಂದಾಗಬಾರದು ಎಂದು ಕೃಷಿ ಇಲಾಖೆ ಹಾಗೂ ತಹಶೀಲ್ದಾರರು ಗ್ರಾಮ ಮಟ್ಟದಲ್ಲಿ ಅರಿವು ಮೂಡಿಸಬೇಕು ಎಂದರು.

ಜಿಲ್ಲೆಯಲ್ಲಿ ಪ್ರವಾಹಕ್ಕೆ ತುತ್ತಾಗುವ ಸಾಧ್ಯತೆಯಿರುವ 153 ಗ್ರಾಮಗಳನ್ನು ಗುರುತಿಸಲಾಗಿದೆ. ಮಹಾರಾಷ್ಟ್ರದ ಡ್ಯಾಂಗಳಿಂದ ನೀರು ಬಿಡುಗಡೆ ಮಾಡುವ ಮುನ್ನ ಮಾಹಿತಿ ಪಡೆದು ನದಿ ತೀರದ ಗ್ರಾಮಸ್ಥರಿಗೆ ಮುಂಚಿತವಾಗಿ ಎಚ್ಚರಿಕೆ ನೀಡಬೇಕು. ಡಂಗೂರ ಸಾರುವ ಮೂಲಕ ಜನರಿಗೆ ಮಾಹಿತಿ ತಲುಪಿಸಬೇಕು. ಸಿಡಿಲು ಹಾಗೂ ಪ್ರವಾಹದಿಂದ ಮಾನವ ಮತ್ತು ಪ್ರಾಣಿ ಹಾನಿ ಸಂಭವಿಸದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಶಿಥಿಲಾವಸ್ಥೆಯಲ್ಲಿರುವ ಶಾಲೆ, ಅಂಗನವಾಡಿ ಮತ್ತು ವಸತಿ ನಿಲಯ ಕಟ್ಟಡಗಳನ್ನು ತಕ್ಷಣ ಗುರುತಿಸಿ ಸ್ಥಳಾಂತರಿಸುವಂತೆ ಸೂಚನೆ ನೀಡಿದ ಅವರು, ಮಳೆಯಿಂದ ಬೆಳೆ, ರಸ್ತೆ, ಸೇತುವೆ ಹಾಗೂ ಆಸ್ತಿಪಾಸ್ತಿಗಳಿಗೆ ಹಾನಿಯಾದರೆ 24 ಗಂಟೆಯೊಳಗೆ ಮಾಹಿತಿ ಸಲ್ಲಿಸಬೇಕು ಎಂದು ಕಟ್ಟುನಿಟ್ಟಾಗಿ ತಿಳಿಸಿದರು.

ಮಳೆ ಮತ್ತು ಪ್ರವಾಹದಿಂದ ರಸ್ತೆ ಸಂಪರ್ಕ ಕಡಿತವಾಗುವ ಪ್ರದೇಶಗಳಿಗೆ ಈಗಲೇ ಪರ್ಯಾಯ ಮಾರ್ಗಗಳನ್ನು ಗುರುತಿಸುವಂತೆ ಸೂಚಿಸಿದ ಜಿಲ್ಲಾಧಿಕಾರಿಗಳು, ತಾಲೂಕು ಮಟ್ಟದಲ್ಲಿ 247 ನಿಯಂತ್ರಣ ಕೊಠಡಿಗಳನ್ನು ಸ್ಥಾಪಿಸಿ ಸಿಬ್ಬಂದಿ ನಿಯೋಜಿಸುವಂತೆ ಆದೇಶಿಸಿದರು.

ಮಳೆಗಾಲದಲ್ಲಿ ಹಾವು ಕಚ್ಚುವ ಪ್ರಕರಣಗಳು ಹೆಚ್ಚಾಗುವ ಹಿನ್ನೆಲೆಯಲ್ಲಿ ಜಿಲ್ಲೆಯ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಆಸ್ಪತ್ರೆಗಳಲ್ಲಿ ಅಗತ್ಯ ಪ್ರಮಾಣದ ಎಂಟಿ ವೇನಮ್ ಡೋಸ್ ದಾಸ್ತಾನು ಇರಿಸುವಂತೆ ಆರೋಗ್ಯ ಇಲಾಖೆಗೆ ಸೂಚನೆ ನೀಡಲಾಯಿತು.

ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಮಳೆ ನೀರು ಸರಾಗವಾಗಿ ಹರಿಯಲು ಚರಂಡಿ ಹಾಗೂ ನಾಲೆಗಳ ಹೂಳೆತ್ತುವ ಕಾರ್ಯವನ್ನು ತಕ್ಷಣ ಕೈಗೊಳ್ಳಬೇಕು. ಗ್ರಾಮ ಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಗಳು ಸಂಪೂರ್ಣ ಸ್ವಚ್ಛತಾ ಅಭಿಯಾನ ಹಮ್ಮಿಕೊಳ್ಳಬೇಕು ಎಂದು ಜಿಲ್ಲಾಧಿಕಾರಿ ಖಡಕ್ ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಸಿಇಒ ರಾಜುಲ್ ಸಂಕನೂರ್ ಮಾತನಾಡಿ, ಪ್ರವಾಹ ಪರಿಸ್ಥಿತಿ ಉಂಟಾದಲ್ಲಿ ಜನರನ್ನು ಸ್ಥಳಾಂತರಿಸಲು ಕಾಳಜಿ ಕೇಂದ್ರಗಳನ್ನು ಈಗಲೇ ಗುರುತಿಸಬೇಕು. ಮಳೆಯ ನಡುವೆಯೂ ಶುದ್ಧ ಕುಡಿಯುವ ನೀರಿನ ಪೂರೈಕೆ ನಿರಂತರವಾಗಿರಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಡಿ.ಸಿ.ಪಿ. ಶಾಲೂ, ಅಪರ ಜಿಲ್ಲಾಧಿಕಾರಿ ರಾಯಪ್ಪ ಹುಣಸಗಿ, ಹೆಚ್ಚುವರಿ ಎಸ್.ಪಿ.ಮಹೇಶ ಮೇಘಣ್ಣನವರ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಸಹಾಯಕ ಆಯುಕ್ತೆ ಸಾಹಿತ್ಯ ಆಲದಕಟ್ಟಿ ಸೇರಿದಂತೆ ಜಿಲ್ಲಾ ಮಟ್ಟದ ಇತರೆ ಅಧಿಕಾರಿಗಳು, ತಾಲೂಕಿನ ತಹಶೀಲ್ದಾರರು ಭಾಗವಹಿಸಿದ್ದರು.

ಮುಂಗಾರು ಬಿತ್ತನೆ ಬೀಜ ವಿತರಣೆಗೆ ಚಾಲನೆ
ಸರ್ಕಾರ ಗುಣಮಟ್ಟದ ಬೀಜಗಳನ್ನು ವಿತರಿಸುತ್ತದೆ : ವಜ್ಜಲ್



ಲಿಂಗಸುಗೂರು,ಜೂ.02- ಸರ್ಕಾರ ವಿತರಿಸುವ ಬೀಜಗಳು ಗುಣಮಟ್ಟದ ಮಾನದಂಡಗಳನ್ನು ಪಾಲಿಸಿ ಪರಿಶೀಲಿಸಿದ ನಂತರವೇ ಗುಣಮಟ್ಟದ ಬೀಜಗಳನ್ನು ರೈತರಿಗೆ ನೀಡಲಾಗುತ್ತಿವೆ.ಹೀಗಾಗಿ ರೈತರು ಯಾವುದೇ ಅನುಮಾನವಿಲ್ಲದೆ ಸರ್ಕಾರದ ವತಿಯಿಂದ ಲಭ್ಯವಾಗುವ ಬೀಜಗಳನ್ನು ಪಡೆದು ಬಿತ್ತನೆ ಮಾಡಬಹುದು ಎಂದು ಶಾಸಕ ಮಾನಪ್ಪ ವಜ್ಜಲ್ ಹೇಳಿದರು.

ಪಟ್ಟಣದ ರೈತ ಸಂಪರ್ಕ ಕೇಂದ್ರದಲ್ಲಿ ಕೃಷಿ ಇಲಾಖೆ ವತಿಯಿಂದ ಮುಂಗಾರು ಹಂಗಾಮಿನ ಬೀಜ ವಿತರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಈ ಬಾರಿ ಉತ್ತಮ ಮಳೆಯಾಗುತ್ತಿರುವುದರಿಂದ ರೈತರಿಗೆ ಕೃಷಿ ಚಟುವಟಿಕೆಗಳಿಗೆ ಅನುಕೂಲಕರ ವಾತಾವರಣ ನಿರ್ಮಾಣವಾಗಿದೆ. ಈಗಾಗಲೇ ಹಲವೆಡೆ ಬಿತ್ತನೆ ಕಾರ್ಯ ಆರಂಭವಾಗಿದ್ದು, ಸುಮಾರು 45 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ವಿವಿಧ ಬೆಳೆಗಳ ಬಿತ್ತನೆ ನಡೆಯುವ ನಿರೀಕ್ಷೆಯಿದೆ ಎಂದು ತಿಳಿಸಿದರು.

2026-27ನೇ ಸಾಲಿನ ಮುಂಗಾರು ಹಂಗಾಮಿಯ ಕೃಷಿ ಚಟುವಟಿಕೆಗಳಿಗೆ ಉತ್ತೇಜನ ನೀಡುವ ಉದ್ದೇಶದಿಂದ ರೈತರಿಗೆ ಅಗತ್ಯ ದಾಖಲೆಗಳ ಆಧಾರದ ಮೇಲೆ ವಿವಿಧ ಬೆಳೆಗಳ ಗುಣಮಟ್ಟದ ಬೀಜಗಳನ್ನು ವಿತರಿಸಲಾಗುತ್ತಿದೆ.

ರೈತರು ಬೀಜ ಪಡೆಯಲು ಪಾಸ್‌ಬುಕ್, ಪಹಣಿ, ಆಧಾರ್ ಕಾರ್ಡ್ ಸೇರಿದಂತೆ ಅಗತ್ಯ ದಾಖಲೆಗಳನ್ನು ಸಲ್ಲಿಸಿ ಸರ್ಕಾರದ ಸೌಲಭ್ಯವನ್ನು ಪಡೆದುಕೊಳ್ಳಬಹುದು. ಸರ್ಕಾರ ರೈತರಿಗೆ ಉತ್ತಮ ಗುಣಮಟ್ಟದ ಬೀಜಗಳನ್ನು ಒದಗಿಸುವ ಮೂಲಕ ಕೃಷಿ ಉತ್ಪಾದನೆ ಹೆಚ್ಚಿಸಲು ಕ್ರಮ ಕೈಗೊಂಡಿದೆ ಎಂದು ಹೇಳಿದರು.

ರೈತರೇ ದೇಶದ ಬೆನ್ನೆಲುಬು. ರೈತರು ಸುಖವಾಗಿರಬೇಕಾದರೆ ಉತ್ತಮ ಮಳೆ, ಬೆಳೆಗಳಿಗೆ ನ್ಯಾಯಯುತ ಬೆಲೆ ಹಾಗೂ ಉತ್ತಮ ಇಳುವರಿ ದೊರೆಯಬೇಕು. ಈ ಮೂರು ಅಂಶಗಳು ರೈತರ ಜೀವನದ ಆಧಾರವಾಗಿವೆ. ದೇವರ ಆಶೀರ್ವಾದದಿಂದ ಈ ವರ್ಷ ಉತ್ತಮ ಮಳೆಯಾಗಿ ರೈತರಿಗೆ ಸಮೃದ್ಧ ಬೆಳೆ ಸಿಗಲಿ ಎಂದು ಆಶಿಸಿದರು.

ತೊಗರಿ, ಭತ್ತ, ಸೂರ್ಯಕಾಂತಿ, ಸಜ್ಜೆ ಸೇರಿದಂತೆ ವಿವಿಧ ಬೆಳೆಗಳನ್ನು ರೈತರು ಮುಂಗಾರು ಹಂಗಾಮಿಯಲ್ಲಿ ಬೆಳೆಯುತ್ತಾರೆ. ಬೀಜ ಬಿತ್ತನೆ ಮಾಡಿದ ನಂತರ ಬೆಳೆಗಳನ್ನು ಮಕ್ಕಳಂತೆ ಕಾಳಜಿಯಿಂದ ಪಾಲನೆ ಮಾಡಬೇಕು. ಸರಿಯಾದ ನಿರ್ವಹಣೆ, ಸಮಯೋಚಿತ ಗೊಬ್ಬರ ಮತ್ತು ಕೀಟನಾಶಕ ಬಳಕೆ, ನೀರಿನ ಸಮರ್ಪಕ ನಿರ್ವಹಣೆ ಮಾಡಿದಾಗ ಮಾತ್ರ ಉತ್ತಮ ಇಳುವರಿ ಪಡೆಯಲು ಸಾಧ್ಯವಾಗುತ್ತದೆ ಎಂದು ರೈತರಿಗೆ ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಕೃಷಿ ಅಧಿಕಾರಿ ವಿಜಯಮೂರ್ತಿ, ಮಂಡಲ ಅಧ್ಯಕ್ಷ ಕೆ, ನಾಗಭೂಷಣ, ಗಿರಿಮಲ್ಲನಗೌಡ ಕರಡಕಲ್, ಅಯ್ಯಪ್ಪ ಮಾಳೂರು, ವೆಂಕನಗೌಡ ಐದನಾಳ, ರಾಜು ಚವ್ಹಾಣ, ಪರಮೇಶ ಯಾದವ, ಶಂಕರಗೌಡ, ಕೃಷಿ ಇಲಾಖೆಯ ಅಮರೇಗೌಡ, ರೇವಣಸಿದ್ದಯ್ಯ ಸೇರಿದಂತೆ ಹಲವಾರು ರೈತರು, ಮುಖಂಡರು ಹಾಗೂ ಕೃಷಿ ಇಲಾಖೆಯ ಅಧಿಕಾರಿಗಳು ಇದ್ದರು.



ಸರ್ಕಾರಿ ಶಾಲೆ ಮಕ್ಕಳಿಗೆ ಉಚಿತ ನೋಟ್‌ಬುಕ್, ಪೆನ್ ವಿತರಣೆ

ಸೇಡಂ,ಜೂ.03-

ತಾಲೂಕಿನ ಹುಡಾ (ಎಂ) ಗ್ರಾಮದ ಜನತಾ ಕಾಲೋನಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಹೊಸ ಶೈಕ್ಷಣಿಕ ವರ್ಷದ ಅಂಗವಾಗಿ ಶಾಲಾ ಪ್ರಾರಂಭೋತ್ಸ ವ ಕಾರ್ಯಕ್ರಮವವನ್ನು ಅತ್ಯಂತ ಸಂಭ್ರಮ ಹಾಗೂ ಸಡಗರದಿಂದ ಆಚರಿಸಲಾಯಿತು.


ಶಾಲಾ ಪ್ರಾರಂಭೋತ್ಸ ವದ ಸ್ಮರಣಾರ್ಥವಾಗಿ ಮಾಜಿ ಎಪಿಎಂಸಿ ಅಧ್ಯಕ್ಷ ಗುರುನಾಥ್ ರೆಡ್ಡಿ ಪಾಟೀಲ್ ಹುಡಾ (ಎಂ) ಅವರು ಶಾಲೆಯ ಎಲ್ಲ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ಹಾಗೂ ಪೆನ್ನುಗಳನ್ನು ವಿತರಿಸಿ, ಸಿಹಿ ತಿನಿಸುವ ಮೂಲಕ ಮಕ್ಕಳನ್ನು ಪ್ರೋತ್ಸಾ ಹಿಸಿದರು. ಈ ಸಂದರ್ಭದಲ್ಲಿ ವಿದ್ಯಾರ್ಥಿಗಳು ಹಾಗೂ ಪಾಲಕರು ಸಂತಸ ವ್ಯಕ್ತಪಡಿಸಿದರು.

ಕಾರ್ಯಕ್ರಮದ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕ್ಷೇತ್ರ ಶಿಕ್ಷಣಾಧಿಕಾರಿ ಮಾರುತಿ ಹುಜರಾತಿ ಅವರು ಮಾತನಾಡಿ, ಸರ್ಕಾರಿ ಶಾಲೆಗಳ ಬಲವರ್ಧನೆಗೆ ಸಾರ್ವಜನಿಕರು ಹಾಗೂ ದಾನಿಗಳ ಸಹಕಾರ ಅತ್ಯಗತ್ಯವಾಗಿದೆ. ಗ್ರಾಮೀಣ ಭಾಗದ ಮಕ್ಕಳ ಶಿಕ್ಷಣದ ಅಭಿವೃದ್ಧಿಗೆ ಇಂತಹ ನೆರವುಗಳು ಪ್ರೇರಣಾದಾಯಕವಾಗಿದ್ದು, ವಿದ್ಯಾರ್ಥಿಗಳಲ್ಲಿ ಕಲಿಕೆಯ ಉತ್ಸಾ ಹ ಹೆಚ್ಚಿಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುರಳಿಧರ ರೆಡ್ಡಿ, ಶಾಲೆಯ ಮುಖ್ಯಗುರು ಉಮಾಕಾಂತ, ಶಿಕ್ಷಕರಾದ ಯಲ್ಲಪ್ಪ ಪೂಜಾರಿ, ರಮೇಶ್ ಕಡಗಂಚಿ, ಮುದೋಳ, ಸಿಆರ್‌ಪಿ ಶರಣಪ್ಪ ಪರಮಾ, ಸಹ ಶಿಕ್ಷಕರಾದ ಕೌಸರ್ ಬೇಗಂ ಹಾಗೂ ಜ್ಯೋತಿ ಉಪಸ್ಥಿತರಿದ್ದರು.

ಇದೇ ವೇಳೆ ಶಾಲಾ ಅಭಿವೃದ್ದಿ ಮತ್ತು ಮೇಲುಸ್ತುವಾರಿ ಸಮಿತಿ (ಎಸ್‌ಡಿಎಂಸಿ) ಅಧ್ಯಕ್ಷ ಕೋಕಿಲ್ ಹಾಗೂ ಸದಸ್ಯರು, ಅಂಗನವಾಡಿ ಕಾರ್ಯಕರ್ತೆಯರು, ಗ್ರಾಮಸ್ಥರು ಮತ್ತು ಶಿಕ್ಷಣಾಭಿಮಾನಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಮಕ್ಕಳಿಗೆ ಶುಭ ಹಾರೈಸಿದರು.

ಪ್ರತಿ ಮನೆಯಲ್ಲೂ ಇರಲಿ ಪುಸ್ತಕ ಕೋಣೆ: ಕನ್ನಡ ಪುಸ್ತಕ ಪ್ರಾಧಿಕಾರದ ಅಧ್ಯಕ್ಷ ಡಾ.ಮಾನಸ ಸಲಹೆ



ಕೊಪ್ಪಳ ಜೂನ್ 03-

ನಮ್ಮೆಲ್ಲರ ಮನೆಯಲ್ಲಿ ಭಕ್ತಿಗಾಗಿ ದೇವರ ಕೋಣೆ ಇರುವಂತೆ, ಪುಸ್ತಕಕ್ಕೂ ಮೀಸಲು ಜಾಗ ಇರಲಿ, ಪುಸ್ತಕ ಕೋಣೆ ಇರಲಿ ಎಂದು ಕನ್ನಡ ಪುಸ್ತಕ ಪ್ರಾಧಿಕಾರ ಅಧ್ಯಕ್ಷರಾದ ಡಾ.ಮಾನಸ ಅವರು ಸಲಹೆ ಮಾಡಿದರು.

ಕರ್ನಾಟಕ ಸರ್ಕಾರದ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕನ್ನಡ ಪುಸ್ತಕ ಪ್ರಾಧಿಕಾರದಿಂದ ನಗರದ ಎನ್.ಜಿ.ಓ ಕಾಲೋನಿಯಲ್ಲಿನ ಲೇಖಕರು ಹಾಗೂ ರಂಗಕ ರ್ಮಿಗಳಾದ ನಾಗರಾಜನಾಯಕ ಡಿ. ಡೊಳ್ಳಿನ ಅವರ ಅಪ್ಪಾಜಿ ನಿಲಯದ ಮನೆಯಲ್ಲಿ ಮನೆಗೊಂದು ಗ್ರಂಥಾಲಯ ಕಾರ್ಯಕ್ರಮದಡಿ ಜೂನ್ 2ರಂದು ಏರ್ಪಡಿಸಲಾಗಿದ್ದ ಪುಸ್ತಕ ಪ್ರದರ್ಶನಕ್ಕೆ ದೀಪ ಬೆಳಗಿಸಿ ಚಾಲನೆ ನೀಡಿ ಅವರು ಮಾತನಾಡಿದರು.

ಪ್ರತಿಯೊಬ್ಬರ ಮನೆಯಲ್ಲೂ ಪುಸ್ತಕಗಳಿರಬೇಕು ಎಂಬುದು ಭಾರತ ಭಾಗ್ಯವಿಧಾತ ಡಾ.ಬಿ.ಆರ್. ಅಂಬೇಡ್ಕರ್ ಅವರ ಕನಸು. ಓದು ಮನುಷ್ಯನನ್ನು ಪ್ರಜ್ಞಾವಂತ ನನ್ನಾಗಿಸುತ್ತದೆ. ಸಮಾಜದಲ್ಲಿ ಉತ್ತಮ ನಾಗರಿಕರಾಗಲು ಓದು ತುಂಬಾ ಸಹಕಾರಿಯಾಗಲಿದೆ. ಇಂದಿನ ಒತ್ತಡದ ಬದುಕಿನಲ್ಲಿ ಓದು ಮಾತ್ರ ನಮ್ಮನ್ನು ಶಾಂತವಾಗಿ ರುವತೆ ಮಾಡುತ್ತದೆ. ಪುಸ್ತಕಗಳು ಉತ್ತಮ ಸ್ನೇಹಿತರಿದ್ದಂತೆ. ಓದು ಮತ್ತು ಲೇಖಕ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ಈ ವರೆಗೂ ಲೇಖಕನಿಗೆ ಸಿಕ್ಕ ಗೌರವ ಓದುಗನಿಗೆ ಸಿಗುತ್ತಿರಲಿಲ್ಲ. ಇದನ್ನ ರಿತು ಕನ್ನಡ ಪುಸ್ತಕ ಪ್ರಾಧಿಕಾರವು ಓದುಗ ಪ್ರತಿ ಮನೆಯಲ್ಲೂ ಇರಲಿ ಎನ್ನುವ ಆಶಯದೊಂದಿಗೆ ಈ ಮನೆಗೊಂದು ಗ್ರಂಥಾಲಯ ಅನುಷ್ಠಾನ ಸಮಾರಂಭ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಶಿಕ್ಷಕರಾದ ಶಿವಮ್ಮ, ಉಪನ್ಯಾಸಕರಾದ ನಿಂಗಪ್ಪ ಕಂಬಳಿ, ಮುಖ್ಯಾಧ್ಯಾಪಕರಾದ ವಿಕಯ ಲಕ್ಷ್ಮಿ, ಮಾರುತಿ ಕಟ್ಟಿಮನಿ ಗೆಳೆಯರ ಬಳಗ ಗುಡಿ ಗ್ರಂಥಾಲಯ ನಿರ್ಮಾಣ ಮಾಡಿದ್ದಕ್ಕಾಗಿ ಈ ಐವರ ಮನೆಗೆ ತೆರಳಿ ಕನ್ನಡ ಪುಸ್ತಕ ಪ್ರಾಧಿಕಾರದಿಂದ ಗೌರವಿಸಿ ಸನ್ಮಾನಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾ ಗ್ರಂಥಾಲಯ ಜಾಗೃತಿ ಸಮಿತಿ ಸಂಚಾಲಕ ಜಿ.ಎಸ್.ಗೋನಾಳ, ಜಿಲ್ಲಾ ಗ್ರಂಥಾಲಯ ಜಾಗೃತಿ ಸಮಿತಿ ಸದಸ್ಯರಾದ ಸಾವಿತ್ರಿ ಮುಜುಂದಾರ, ಫಕೀರಪ್ಪ ವಜ್ರಬಂಡಿ, ನಿವೃತ್ತ ಉಪನ್ಯಾಸಕರಾದ ಎಸ್.ಎ. ರಜಪೂತ, ಉಪಪ್ರಾಂಶುಪಾಲರಾದ ಮಂಜುನಾಥ ಚಿತ್ರಗಾರ ಮತ್ತಿತರರು ಹಾಜರಿದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಕಾಂಗ್ರೆಸ್‌ನ 'ಟ್ರಬಲ್ ಶೂಟರ್' ಈಗ ಕರ್ನಾಟಕದ ಮುಖ್ಯಮಂತ್ರಿ

ಯುವಕನನ್ನು ಸಚಿವರನ್ನಾಗಿ ಮಾಡಿ ಬಂಧಿಖಾನೆ ಖಾತೆ ನೀಡಿದರು.

ಆದರೂ ಕೆಲ ರಾಜಕೀಯ ಕಾರಣಗಳಿಂದ ಅವರಿಗೆ 1994ರಲ್ಲಿ ಪಕ್ಷದ ಟಿಕೆಟ್ ವಿರೋಧಿಸಲಾಯಿತು, ಧೃತಿಗೆಡದೆ ಡಿ.ಕೆ.ಶಿವಕುಮಾರ್ ಕಾಂಗ್ರೆಸ್ ಬಂಡಾಯ ಅಭ್ಯರ್ಥಿಯಾಗಿ ಜಯಗಳಿಸಿ ಜಯದ ಪರಂಪರೆ ಮುಂದುವರೆಸಿದರು. 2004ರಲ್ಲಿ ಡಿ.ಕೆ. ಶಿವಕುಮಾರ್ ಸಾತನೂರು ಕ್ಷೇತ್ರದಿಂದ 4ನೇ ಭಾರಿ ಆರಿಸಿ ಬಂದರೂ ಕಾಂಗ್ರೆಸ್ ಪಕ್ಷ ಬಹುಮತಗಳಿಸುವಲ್ಲಿ ವಿಫಲವಾಯಿತು. ಬಳಿಕ ಜೆಡಿಎಸ್ ಜೊತೆಗೂಡಿ ಕಾಂಗ್ರೆಸ್ ಸಮ್ಮಿಶ್ರ ಸರಕಾರ ರಚನೆಯಾಯಿತು. ಹೀಗೆ ರಾಜ್ಯದಲ್ಲಿ ಪ್ರಥಮ ಬಾರಿಗೆ ಉದಯಿಸಿದ ಕಾಂಗ್ರೆಸ್-ಜೆಡಿಎಸ್ ಸಮ್ಮಿಶ್ರ ಸರಕಾರದಲ್ಲಿ ಡಿ.ಕೆ.ಶಿವಕುಮಾರ್ಗೆ ಸ್ಥಾನವಿರಲಿಲ್ಲ.

ಟ್ರಬಲ್ ಶೂಟರ್: ನೆರೆಯ ಮಹಾರಾಷ್ಟ್ರದಲ್ಲಿ ವಿಲಾಸ್‌ರಾವ್ ದೇಶ್‌ಮುಖ್ ಸಮ್ಮಿಶ್ರ ಸರಕಾರ ಎನ್‌ಸಿಪಿ ಪಕ್ಷದೊಂದಿಗೆ ಸೆಣಸಾಟಕ್ಕಿಳಿದಾಗ ಸರಕಾರ ಅಲ್ಪಮತದ ಅಪಾಯಕ್ಕೆ ಸಿಕ್ಕಿಕೊಂಡಿತ್ತು. ಆಗ ಕುದುರೆ ವ್ಯಾಪಾರದ ಅಪಾಯ ಎದುರಾಗಿತ್ತು. ತಕ್ಷಣ ಕಾಂಗ್ರೆಸ್ ಹೈಕಮಾಂಡಿನ ಆದೇಶದಂತೆ ಕಾರ್ಯಪ್ರವೃತ್ತರಾದ ಶಿವಕುಮಾರ್ ಮಹಾರಾಷ್ಟ್ರ ಕಾಂಗ್ರೆಸ್ ಶಾಸಕರನ್ನು ಮುಂಬೈಯಿಂದ ಬೆಂಗಳೂರಿಗೆ ಕರೆದುಕೊಂಡು ಬಂದು 10-12 ದಿನಗಳ ಕಾಲ ಬೆಂಗಳೂರಿನ ರೆಸಾರ್ಟ್‌ವೊಂದರಲ್ಲಿ ಇರಿಸಿಕೊಂಡು ರಕ್ಷಣೆ ನೀಡಿದರು. ಮುಂಬೈಯಲ್ಲಿ ಪರಿಸ್ಥಿತಿ ತಿಳಿಯಾಗಿ ಸರಕಾರಕ್ಕೆ ಅಪಾಯವಿಲ್ಲವೆಂಬ ಸಂಗತಿ ಮನವರಿಕೆಯಾದ ನಂತರವಷ್ಟೇ ಮಹಾರಾಷ್ಟ್ರ ಶಾಸಕರನ್ನು ಕ್ಷೇಮವಾಗಿ ಕಳುಹಿಸಲಾಯಿತು.

ಹೀಗೆ ಡಿ.ಕೆ.ಶಿವಕುಮಾರ್ ಸಕಾಲಿಕ ರಾಜಕೀಯ ತಂತ್ರಗಾರಿಕೆ ಫಲಕೊಟ್ಟು ಮಹಾರಾಷ್ಟ್ರದಲ್ಲಿ ಸಿಎಂ ವಿಲಾಸ್‌ರಾವ್ ದೇಶ್‌ಮುಖ್ ಸರಕಾರ ಅಪಾಯ ಎದುರಿಸದೆ ಪಾರಾಗಿ ಮುಂದುವರೆಯುವಂತಾಯಿತು.

1999ರಲ್ಲಿ ಎಸ್.ಎಂ.ಕೃಷ್ಣ ಅವರು ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿ ಆಯ್ಕೆಗೊಂಡಾಗ ಡಿ.ಕೆ.ಶಿವಕುಮಾರ್ ಅವರ ಹಿಂದೆ ಬೆನ್ನೆಲುಬಾಗಿ ನಿಂತು ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷ ಅಭೂತಪೂರ್ವ ರೀತಿಯಲ್ಲಿ ಜಯಗಳಿಸಿ ಸರಕಾರ ರಚಿಸುವಲ್ಲಿ ಕಾರಣೀಭೂತರಾದರು. ಎಸ್.ಎಂ.ಕೃಷ್ಣ ಚುನಾವಣಾ ಪೂರ್ವದಲ್ಲಿ ಪಾಂಚಜನ್ಯ ಮೊಳಗಿಸುವ ಮೂಲಕ ಚುನಾವಣಾ ಸಮರ ಆರಂಭಿಸಿದಾಗ, ಈ ಐತಿಹಾಸಿಕ ಯಾತ್ರೆಯನ್ನು ಆಯೋಜಿಸಿದವರು ಡಿ.ಕೆ.ಶಿವಕುಮಾರ್, ಇದರಿಂದಲೇ ಕಾಂಗ್ರೆಸ್ ಪಕ್ಷ 139 ಸ್ಥಾನಗಳನ್ನು ಗಳಿಸಿ ಸ್ವಂತ ಬಲದ ಮೇಲೆ ಸರಕಾರವನ್ನು ರಚಿಸುವಂತಾಯಿತು.

1999ರಲ್ಲಿ ಡಿ.ಕೆ.ಶಿವಕುಮಾರ್ ಅವರಿಗೆ ಮತ್ತೊಮ್ಮೆ ಸಾತನೂರು ಕ್ಷೇತ್ರದಿಂದ ಸ್ಪರ್ಧಿಸಲು ಕಾಂಗ್ರೆಸ್ ಪಕ್ಷ ಅನುಮತಿ ನೀಡಿತ್ತು. ಈ ಭಾರಿ ಅವರ ಎದುರಾಳಿ ಎಚ್.ಡಿ.ದೇವೇಗೌಡರ ಪುತ್ರ ಎಚ್.ಡಿ.ಕುಮಾರಸ್ವಾಮಿ, ದೇವೇಗೌಡರು ರಾಜಕೀಯ ಸ್ಥಿತ್ಯಂತರದಿಂದ ಅಂದಿನ ಪ್ರಧಾನಿಯಾಗಿದ್ದರು. ಆದರೆ ಆ ಚುನಾವಣೆಯಲ್ಲಿ ಕುಮಾರಸ್ವಾಮಿ ಸೋತರು. ಡಿ.ಕೆ.ಶಿವಕುಮಾರ್ ಸತತ 3ನೇ ಬಾರಿಗೆ ಮರಳಿ ಗೆಲುವು ಸಾಧಿಸಲು ಸಾಧ್ಯವಾಯಿತು. ಎಸ್.ಎಂ.ಕೃಷ್ಣ ಸಂಪುಟದಲ್ಲಿ ಸಚಿವರನ್ನಾಗಿ ನೇಮಿಸಿ ಮಹತ್ವದ ಸಹಕಾರ ಖಾತೆ ನೀಡುವ ಮೂಲಕ ಡಿ.ಕೆ.ಶಿವಕುಮಾರ್ ಶ್ರಮಕ್ಕೆತಕ್ಕ ಮನ್ನಣೆ ನೀಡಿದರು.(1999-2002).

2013ರಲ್ಲಿ ಕಾಂಗ್ರೆಸ್ ಪಕ್ಷ ಅಧಿಕಾರಕ್ಕೆ ಮರಳಿ ಬಂದು ಸಿದ್ಧರಾಮಯ್ಯ ಮುಖ್ಯಮಂತ್ರಿಗಳಾಗಿ ಆಯ್ಕೆಗೊಂಡಾಗ ಆರಂಭದಲ್ಲಿ ಶಿವಕುಮಾರ್ ಅವರಿಗೆ ಸಚಿವ ಸ್ಥಾನ ಕೈತಪ್ಪಿತ್ತು. ಬಳಿಕ 7 ತಿಂಗಳ ಅಲ್ಪಾವಧಿಯ ನಂತರ ಶಿವಕುಮಾರ್, ಸಿದ್ಧರಾಮಯ್ಯ ಸಂಪುಟದಲ್ಲಿ ಸಚಿವ ಸ್ಥಾನ ಪಡೆದುಕೊಂಡರು. ಇಂಧನ ಖಾತೆಯಂತಹ ಪ್ರಮುಖ ಖಾತೆಯನ್ನು ನೀಡಲಾಯಿತು.

ದೋಷರಹಿತ ಮತದಾರರ ಪಟ್ಟಿ ಸಿದ್ದಪಡಿಸಲು ಸಹಕರಿಸಿ : ಚುನಾವಣಾಧಿಕಾರಿ ಇಕ್ರಮ್ ಶರೀಫ್



ಕಲಬುರಗಿ,ಜೂ.03-

ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ರಾಜ್ಯಾದ್ಯಂತ ಮತದಾರರ ವಿಶೇಷ ಸಮಗ್ರ ಪರಿಷ್ಕರಣೆ ಪಟ್ಟಿ ತಯಾರಿಸುವ ವೇಳಾಪಟ್ಟಿ ಪ್ರಕಟವಾಗಿದ್ದು, ಕಲಬುರಗಿ ಜಿಲ್ಲೆಯಲ್ಲಿ ದೋಷ ರಹಿತ ಮತ್ತು ಸ್ವಚ್ಛ ಮತದಾರರ ಪಟ್ಟಿ ತಯಾರಿಸಲು ರಾಜಕೀಯ ಪಕ್ಷಗಳು, ಮುಖಂಡರು ಹಾಗೂ ಸಾರ್ವಜನಿಕರು ಸಹಕರಿಸಬೇಕು ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿ ಇಕ್ರಮ್ ಶರೀಫ್ ತಿಳಿಸಿದ್ದಾರೆ. ಮಂಗಳವಾರ ಸುದ್ದಿಗೋಷ್ಠಿ ಯಲ್ಲಿ ಮಾತನಾಡಿದ ಅವರು, ಎಸ್.ಐ.ಆರ್ ಮೂರನೇ ಹಂತದಡಿ ಕರ್ನಾಟಕದಲ್ಲಿ ವಿಶೇಷ ಸಮಗ್ರ ಮತದಾರರ ಪರಿಷ್ಕರಣೆ ಕಾರ್ಯ ನಡೆಯಲಿದ್ದು, ಜೂನ್ 20ರಿಂದ ಜಿಲ್ಲೆಯಲ್ಲಿ ಪ್ರಕ್ರಿಯೆ ಆರಂಭವಾಗಲಿದೆ ಎಂದರು.

2026ರ ಅಕ್ಟೋಬರ್ 1 ಅನ್ನು ಅರ್ಹತಾ ದಿನಾಂಕವನ್ನಾಗಿ ಪರಿಗ'ಣಿಸಿ ಈ ಕಾರ್ಯ ಕೈಗೊಳ್ಳಲಾಗುತ್ತಿದೆ. ಜೂನ್ 20ರಿಂದ 29ರವರೆಗೆ ಚುನಾವಣಾ ಸಿಬ್ಬಂದಿಗೆ ತರಬೇತಿ ಹಾಗೂ ಪೂರ್ವಸಿದ್ಧತಾ ಕಾರ್ಯ ನಡೆಯಲಿದೆ. ಜೂನ್ 30ರಿಂದ ಜುಲೈ 29ರವರೆಗೆ ಬಿಎಲ್‌ಒಗಳು ಮನೆ-ಮನೆಗೆ ಭೇಟಿ ನೀಡಿ ಮಾಹಿತಿ ಸಂಗ್ರಹಣೆ ನಡೆಸಲಿದ್ದಾರೆ. ಇದೇ ಅವಧಿಯಲ್ಲಿ ಮತಗಟ್ಟೆಗಳ ರೇಷನ ಲೈಸೇಷನ್ ಕಾರ್ಯವೂ ನಡೆಯಲಿದೆ. ಆಗಸ್ಟ್ 5ರಂದು ಕರಡು ಮತದಾರರ ಪಟ್ಟಿ ಪ್ರಕಟಿಸಲಾಗುತ್ತದೆ. ಆಗಸ್ಟ್ 5ರಿಂದ ಸೆಪ್ಟೆಂಬರ್ 4ರವರೆಗೆ ಆಕ್ಷೇಪಣೆಗಳನ್ನು ಆಹ್ವಾನಿಸಲಾಗುತ್ತದೆ. ಅಕ್ಟೋಬರ್ 3ರೊಳಗೆ ಆಕ್ಷೇಪಣೆಗಳ ವಿಲೇವಾರಿ ನಡೆಸಿ ಅಕ್ಟೋಬರ್ 7ರಂದು ಅಂತಿಮ ಮತದಾರರ ಪಟ್ಟಿ ಪ್ರಕಟಿಸ'ಲಾಗುತ್ತದೆ ಎಂದು ವಿವರಿಸಿದರು.

ಕಲಬುರಗಿ ಜಿಲ್ಲೆಯ 9 ವಿಧಾನಸಭಾ ಕ್ಷೇತ್ರಗಳಲ್ಲಿ ಒಟ್ಟು 23,73,909 ಮತದಾರರಿದ್ದು, ಇವರಲ್ಲಿ 11,89,398 ಪುರುಷರು, 11,84,171 ಮಹಿಳೆಯರು ಹಾಗೂ 340 ಇತರೆ ಮತದಾರರು ಸೇರಿದ್ದಾರೆ. ಜಿಲ್ಲೆಯಲ್ಲಿ 2,400 ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು, ಪ್ರತಿ ಯೊಂದು ಮತಗಟ್ಟೆಗೆ ಬಿಎಲ್ ಒಗಳನ್ನು ನೇಮಕ ಮಾಡಲಾಗಿದೆ. ಮೇಲ್ವಿಚಾರಣೆಗೆ 275 ಬಿಎಲ್‌ಒ ಸ'ೂಪ'ರ್‌ವೈ'ಸ'ರ್‌ಗ'ಳ'ನ್'ನು ನಿಯೋಜಿಸಲಾಗಿದೆ.

ಮತದಾರರ ಪಟ್ಟಿ ಶುದ್ಧೀಕರಣ ಮತ್ತು ಮ್ಯಾಪಿಂಗ್ ಕಾರ್ಯಕ್ಕೆ ಸಹಕರಿಸಲು ರಾಜಕೀಯ ಪಕ್ಷಗಳು ಬೂತ್ ಲೆವೆಲ್ ಏಜೆಂಟ್‌ಗಳನ್ನು ನೇಮಿಸಬೇಕು ಎಂದು ಸೂಚಿಸಲಾಗಿದೆ. ಮನೆಗೆ ಭೇಟಿ ನೀಡುವ ಬಿಎಲ್‌ಒಗಳಿಗೆ ಸಾರ್ವಜನಿಕರು ಅಗತ್ಯ ಸಹಕಾರ ನೀಡಬೇಕು ಎಂದು ಅವರು ಮನವಿ ಮಾಡಿದರು.

ಇನ್ನೂ ಎಸ್.ಐ.ಆರ್ ಕಾರ್ಯವನ್ನು ಪರಿಣಾಮಕಾರಿಯಾಗಿ ನಡೆಸಲು ಬಿಎಲ್‌ಒ ಮಟ್ಟದಲ್ಲಿ ಫೆಸಿಲಿಟೇಷನ್ ಸೆಂಟರ್‌ಗಳನ್ನು ಸ್ಥಾಪಿಸಲಾಗುತ್ತಿದೆ. ಗ್ರಾಮೀಣ ಪ್ರದೇಶಗಳಲ್ಲೂ ವೋಟರ್ ಫೆಸಿಲಿಟೇಷನ್ ಸೆಂಟರ್ ಆರಂಭಿಸಲು ಜಿಲ್ಲಾ ಪಂಚಾಯತ್ ಸಿಇಒ ಅವರಿಗೆ ನಿರ್ದೇಶನ ನೀಡಲಾಗಿದೆ ಎಂದು ಇಕ್ರಮ್ ಶರೀಫ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಜಿಲ್ಲಾ ಪಂಚಾಯತ್ ಸಿ.ಇ.ಓ ರಾಹುಲ್ ಸಂಕನೂರ್, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ ಶಿಂಧೆ, ಇದ್ದರು.



ಧರ್ಮಸ್ಥಳಕ್ಕೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್ ಅಪಘಾತ: 16 ಪ್ರಯಾಣಿಕರಿಗೆ ಗಾಯ

ಜೇವರ್ಗಿ,ಜೂ.03-

ಕಲಬುರಗಿಯಿಂದ ಧರ್ಮಸ್ಥಳಕ್ಕೆ ತೆರಳುತ್ತಿದ್ದ ಸರ್ಕಾರಿ ಬಸ್ ನಿಯಂತ್ರಣ ತಪ್ಪಿ ಅಪಘಾತಕ್ಕೀಡಾದ ಪರಿಣಾಮ 16 ಪ್ರಯಾಣಿಕರು ಸಣ್ಣಪುಟ್ಟ ಗಾಯಗೊಂಡ ಘಟನೆ ತಾಲೂಕಿನ ಕೆಲ್ಲೂರು ಗ್ರಾಮದ ಸಮೀಪ ಮಂಗಳವಾರ ಸಂಜೆ ನಡೆದಿದೆ.

ಅಪಘಾತ ಸಂಭವಿಸಿದ ತಕ್ಷಣ ಸ್ಥಳೀಯರು ಹಾಗೂ ಅಧಿಕಾರಿಗಳು ಗಾಯಾಳುಗಳ ನೆರವಿಗೆ ಧಾವಿಸಿದ್ದು, ಗಾಯಗೊಂಡ ಪ್ರಯಾಣಿಕರನ್ನು ಜೇವರ್ಗಿ ತಾಲೂಕು ಸರ್ಕಾರಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಯಿತು. ವೈದ್ಯರ ಮಾಹಿತಿ ಪ್ರಕಾರ ಎಲ್ಲರೂ ಅಪಾಯದಿಂದ ಪಾರಾಗಿದ್ದು, ಸಣ್ಣ ಪ್ರಮಾಣದ ಗಾಯಗಳಿಗೆ ಚಿಕಿತ್ಸೆ ನೀಡಲಾಗಿದೆ ಎಂದು ತಿಳಿದುಬಂದಿದೆ.

ಅಪಘಾತದ ಸುದ್ದಿ ತಿಳಿಯುತ್ತಿದ್ದಂತೆ ಮಾಜಿ ಶಾಸಕ ದೊಡ್ಡಪ್ಪಗೌಡ ಪಾಟೀಲ ನರಿಬೋಳ ಅವರು ತಾಲೂಕು ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಗಾಯಾಳುಗಳ ಆರೋಗ್ಯ ವಿಚಾರಿಸಿದರು. ಅಲ್ಲದೆ, ವೈದ್ಯರು ಹಾಗೂ ಆಸ್ಪತ್ರೆ ಸಿಬ್ಬಂದಿಯಿಂದ ಚಿಕಿತ್ಸೆ ಕುರಿತು ಮಾಹಿತಿ ಪಡೆದು ಅಗತ್ಯ ಸೌಲಭ್ಯಗಳನ್ನು ಒದಗಿಸುವಂತೆ ಸೂಚಿಸಿದರು.

ಘಟನಾ ಸ್ಥಳಕ್ಕೆ ಜೇವರ್ಗಿ ಪೊಲೀಸ್ ಠಾಣೆಯ ಪಿಎಸ್‌ಐ ಗಜಾನಂದ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಅಪಘಾತಕ್ಕೆ ಕಾರಣವಾದ ಸಂದರ್ಭಗಳ ಕುರಿತು ಮಾಹಿತಿ ಸಂಗ್ರಹಿಸಿ ತನಿಖೆ ಕೈಗೊಂಡಿದ್ದಾರೆ.

ಬಂಡಿಪುರ ಅಭಯಾರಣ್ಯದಲ್ಲಿ ಆದಿವಾಸಿಗಳ ಮಕ್ಕಳಿಗೆ ಉಚಿತ ಬ್ಯಾಗ್ ವಿತರಣೆ

ರಾಯಚೂರು ಜೂ 3.

ಆದಿವಾಸಿಗಳ ಮಕ್ಕಳು ಮಾವುತರ ಮಕ್ಕಳು ಕಾಡು ಕುರುಬರ ಮಕ್ಕಳು ಸೋಲಿಗ ಜನಾಂಗ ಮಕ್ಕಳು ಓದುತ್ತಿರುವ ಸರ್ಕಾರಿ ಕನ್ನಡ ಶಾಲೆ ಗಳಿಗೆ ಭೇಟಿ ನೀಡಿ ಮಕ್ಕಳಿಗೆ ಉಚಿತವಾಗಿ ಬ್ಯಾಗು ಮತ್ತು ಕೊಡೆಗಳನ್ನು (ಛತ್ರಿ) ಬಿಲಾಂಗ್ ಸಖಿ ಟ್ರಸ್ಟ್ ವತಿಯಿಂದ ವಿತರಿಸಲಾಯಿತು.

ಬಿಲಾಂಗ್ ಸಖಿ ಟ್ರಸ್ಟ್ ಸಂಸ್ಥಾಪಕ ಅಧ್ಯಕ್ಷರಾದ ಕನ್ನಡತಿ ಪುಟ್ಟಗೌರಿ ಧಾರಾವಾಹಿಯ ನಟಿ ಹಾಗೂ ಚಲನಚಿತ್ರ ನಿರ್ದೇಶಕಿ ಸಾಹಿತಿ ಆಗಿರುವ ರಂಜಿನಿ ರಾಘವನ್ ನಿನ್ನೆ ಮಂಗಳವಾರ ಇಡೀ ದಿನ ಬಂಡಿಪುರದಲ್ಲಿರುವ ಸರಕಾರಿ ಕಿರಿಯ ಹಿರಿಯ ಪ್ರಾಥಮಿಕ ಶಾಲೆಗಳ ಮಕ್ಕಳೊಂದಿಗೆ ಪಾಠ ಹೇಳುತ್ತಾ ಅವರೊಂದಿಗೆ ಆಟವಾಡುತ್ತಾ ಮಕ್ಕಳಿಗೆ ಶಾಲೆಗೆ ಬರುವಂತೆ ಮನವರಿಕೆ ಮಾಡಿದರು.

ಬಿಲಾಂಗ್ ಸಖಿ ಟ್ರಸ್ಟ್ ವತಿಯಿಂದ ಮಕ್ಕಳಿಗೆ ಆರೋಗ್ಯ ಮತ್ತು ಶಿಕ್ಷಣದ ಕಿಟ್ಟು ಗಳನ್ನು ಉಚಿತವಾಗಿ ನೀಡಿದ್ದು ವಿಶೇಷವಾಗಿತ್ತು. ಬಂಡಿಪುರದಲ್ಲಿ ವಿಪರೀತ ಮಳೆ ಇರುವುದರಿಂದ ಮಕ್ಕಳಿಗೆ ಛತ್ರಿಗಳನ್ನು ಉಚಿತವಾಗಿ ನೀಡಿದರು. ನಾಲ್ಕು ಶಾಲೆಗಳಿಗೆ ಭೇಟಿ ನೀಡಿ ಅಲ್ಲಿರುವ ನೂರಾರು ಮಕ್ಕಳಿಗೆ ಶಿಕ್ಷಣ ಕುರಿತು ಜಾಗೃತಿ ಮೂಡಿಸಿದರು. ಶಾಲೆ ಬಿಟ್ಟ ಮಕ್ಕಳನ್ನು ಶಾಲೆಗೆ ಸೇರಿಸುವ ಅಭಿಯಾನಕ್ಕೆ ಚಾಲನೆ ನೀಡಿದರು.

ಗುಂಡ್ಲುಪೇಟೆ ಕ್ಷೇತ್ರ ಶಿಕ್ಷಣಾಧಿಕಾರಿ ಸ್ವಾಮಿ ಟಿ ಆರ್ ಹಾಗೂ ಸತೀಶ್ ಸಹಾಯಕ ನಿರ್ದೇಶಕರು ಎಂ ಡಿ ಎಂ ಮತ್ತು ರೇವಣ್ಣ ಸಹಾಯಕ ಶಿಕ್ಷಣಾಧಿಕಾರಿಗಳು ಮಧ್ಯಾಹ್ನದ ಊಟ ಹಾಗೂ ಸರಕಾರಿ ಕಿರಿಯ ಪ್ರಾಥಮಿಕ



ಶಾಲೆ ಮಗುವಿನಹಳ್ಳಿ.ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಮೇಲುಕಾಮನಹಳ್ಳಿ ಮತ್ತು ಸರಕಾರಿ ಹಿರಿಯ ಪ್ರಾಥಮಿಕ ವಾಲ್ಮೀಕಿ ಆಶ್ರಮ ವಸತಿ ಶಾಲೆ ಬಂಡಿಪುರ ಹಾಗೂ ಸರಕಾರಿ ಕಿರಿಯ ಪ್ರಾಥಮಿಕ ಶಾಲೆ ಕನಿಲಪುರ ಕಾಲೋನಿ ತಮಿಳುನಾಡು ಗಡಿಭಾಗದಲ್ಲಿರುವ ಸರ್ಕಾರಿ ಶಾಲೆ.

ಈ ಶಾಲೆಗಳ ಮುಖ್ಯ ಶಿಕ್ಷಕರಾದ ಆಂತೋನಿಯಮ್ಮ ಶಿವಕುಮಾರ್ ವೆಂಕಟೇಶ. ಸ್ವಾಮಿ ಹಾಗೂ ಕಲಾ ಸಂಕಲ ಸಂಸ್ಥೆಯ ಕಾರ್ಯದರ್ಶಿ ಮಾರುತಿ ಬಡಿಗೇರ್ ಮತ್ತು ಜನ್ಮಭೂಮಿ ಫೌಂಡೇಶನ್ ಬೆಂಗಳೂರಿನ ಅಧ್ಯಕ್ಷರಾದ ರಘು ಗಂಗೂರು. ಪತ್ರಕರ್ತ ಅಲ್ಲವಲಿ ಈ ತಂಡದಲ್ಲಿ ಪಾಲ್ಗೊಂಡಿದ್ದರು.

ಈ ಸಂದರ್ಭದಲ್ಲಿ ಈ ಶೈಕ್ಷಣಿಕ ವರ್ಷದ ಅಂಗವಾಗಿ ಸರ್ಕಾರದಿಂದ ಸಮವಸ್ತ್ರ. ಪಠ್ಯಪುಸ್ತಕಗಳನ್ನು ಎಲ್ಲಾ ಶಾಲೆಗಳಲ್ಲಿ ವಿತರಿಸಲಾಯಿತು.



ಜೂನ್. 4 ನಾಲ್ಕರಂದು ದಲಿತ ಸಾಹಿತ್ಯ ಪರಿಷತ್ ಪೂರ್ವಭಾವಿ ಸಭೆ

ಸಿಂಧನೂರು,ಜೂ.03-

ದಲಿತ ಸಾಹಿತ್ಯ ಪರಿಷತ್ ಯುವ ಘಟಕ ಮತ್ತು ಮಹಿಳಾ ಘಟಕದ ವತಿಯಿಂದ ದಲಿತ ಸಾಹಿತ್ಯ ಪರಿಷತ್ತಿನ ಜಿಲ್ಲಾ ಘಟಕದ ಅಧ್ಯಕ್ಷ. ಡಾಕ್ಟರ್ ಹುಸೇನಪ್ಪ ಅಮರಾಪುರ ಅವರ ಅಧ್ಯಕ್ಷತೆಯಲ್ಲಿ ಜೂನ್ 4 ರಂದು ಮಧ್ಯಾಹ್ನ 4:00ಗೆ ನಗರದ ಸರ್ಕಾರಿ ನೌಕರರ ಭವನದಲ್ಲಿ ದಲಿತ ಸಾಹಿತ್ಯ ಪರಿಷತ್ ಯುವ ಘಟಕ ಮತ್ತು ಮಹಿಳಾ ಘಟಕದ ನೂತನ ಪದಾಧಿಕಾರಿಗಳ ಆಯ್ಕೆ ಸಭೆ ನಡೆಸಲು ತೀರ್ಮಾನಿಸಲಾಗಿದೆ. ದಲಿತ ಸಾಹಿತ್ಯ ಮತ್ತು ಸಂಸ್ಕೃತಿಯನ್ನು ಪ್ರೀತಿಸುವ ಮತ್ತು ಜೀವನದ ಜನಪರ ಕಾಳಜಿ ಉಳ್ಳ ತಾಲೂಕಿನ ಎಲ್ಲಾ ದಲಿತ ಸಂಘಟನೆಗಳು. ಪ್ರಗತಿಪರರು. ಬುದ್ಧಿಜೀವಿಗಳು. ವಿದ್ಯಾರ್ಥಿ ಯುವಜನರು. ಮಹಿಳೆಯರು ಈ ಸಭೆಗೆ ಹಾಜರಾಗಿ ಸಲಹೆ ಸೂಚನೆಗಳನ್ನು ನೀಡಿ ಸಭೆಯನ್ನು ಯಶಸ್ವಿಗೊಳಿಸಬೇಕು ಎಂದು ಯುವ ಘಟಕದ ಅಧ್ಯಕ್ಷ ತಿಮ್ಮಪ್ಪ ಕಲಮಂಗಿ ಹಾಗೂ ಮಹಿಳಾ ಘಟಕದ ಅಧ್ಯಕ್ಷೆ. ಶೋಭಾ ತೋರಣಗಲ್ ಮನವಿ ಮಾಡಿದ್ದಾರೆ.

ಎನ್.ಎಸ್. ಭೋಸರಾಜು ಅವರಿಗೆ ಸಚಿವ ಸ್ಥಾನ ಮುಂದುವರಿಸಲು ಬಂದೇನವಾಜ್ ಒತ್ತಾಯ

ರಾಯಚೂರು, ಜೂ.3: ಹಿರಿಯ ಕಾಂಗ್ರೆಸ್ ನಾಯಕ ಹಾಗೂ ವಿಧಾನ ಪರಿಷತ್ ಸದಸ್ಯ ಎನ್.ಎಸ್. ಭೋಸರಾಜು ಅವರಿಗೆ ಸಚಿವ ಸ್ಥಾನವನ್ನು ಮುಂದುವರಿಸಬೇಕು ಎಂದು ಎನ್.ಎಸ್. ಭೋಸರಾಜು ಅಭಿಮಾನಿಗಳ ಸಂಘದ ಸಂಸ್ಥಾಪಕ ರಾಜ್ಯಾಧ್ಯಕ್ಷ ಬಂದೇನವಾಜ್ ಒತ್ತಾಯಿಸಿದ್ದಾರೆ.



ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಎನ್.ಎಸ್. ಭೋಸರಾಜು ಅವರು ಕಳೆದ ಐವತ್ತು ವರ್ಷಗಳಿಂದ ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ಹಗಲು-ರಾತ್ರಿ ಶ್ರಮಿಸಿದ್ದು, ಪಕ್ಷದ ಬೆಳವಣಿಗೆಗೆ ಮಹತ್ವದ ಕೊಡುಗೆ ನೀಡಿದ್ದಾರೆ. ಅವರ ಸೇವೆಯನ್ನು ಪರಿಗಣಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟದಲ್ಲಿ ಸಚಿವ ಸ್ಥಾನ ನೀಡಲಾಗಿತ್ತು ಎಂದು ತಿಳಿಸಿದ್ದಾರೆ.

ಸಚಿವರಾಗಿ ಕಾರ್ಯನಿರ್ವಹಿಸಿದ ಅವಧಿಯಲ್ಲಿ ರಾಜ್ಯಾದ್ಯಂತ ಚೆಕ್ ಡ್ಯಾಂಗಳು, ಬ್ರಿಡ್ಜ್-ಕಮ್-ಬ್ಯಾರೇಜ್‌ಗಳು, ಬೋರ್‌ವೆಲ್‌ಗಳು ಸೇರಿದಂತೆ ರೈತರಿಗೆ ಅನುಕೂಲವಾಗುವ ಅನೇಕ ಯೋಜನೆಗಳನ್ನು ಜಾರಿಗೊಳಿಸಿದ್ದಾರೆ. ಅಂತರ್ಜಲ ಸಂರಕ್ಷಣೆ ಹಾಗೂ ಕೃಷಿ ಚಟುವಟಿಕೆಗಳಿಗೆ ಪೂರಕವಾದ ಕಾಮಗಾರಿಗಳ ಮೂಲಕ ರೈತರ ಬದುಕು ಸುಧಾರಿಸಲು ಶ್ರಮಿಸಿದ್ದಾರೆ ಎಂದು ಅವರು ಹೇಳಿದ್ದಾರೆ.

ರಾಯಚೂರು ಜಿಲ್ಲೆಗೆ ನೂರಾರು ಕೋಟಿ ರೂಪಾಯಿ ಅನುದಾನ ತಂದು ಮಾವಿನಕೆರೆ ಅಭಿವೃದ್ಧಿ, ರಾಜ್ಯ ಹಾಗೂ ರಾಷ್ಟ್ರೀಯ ಹೆದ್ದಾರಿ ರಸ್ತೆ ಕಾಮಗಾರಿಗಳು, ವಿವಿಧ ಸಮುದಾಯಗಳಿಗೆ ಸಮುದಾಯ ಭವನಗಳ ನಿರ್ಮಾಣ ಸೇರಿದಂತೆ ಹಲವಾರು ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದಾರೆ. ಇದರಿಂದ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಅವರ ಕೊಡುಗೆ ಗಮನಾರ್ಹವಾಗಿದೆ ಎಂದು ಪ್ರಶಂಸಿಸಿದ್ದಾರೆ.

ರಾಜ್ಯದ ವಿವಿಧ ಭಾಗಗಳಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಯಶಸ್ವಿಯಾಗಿ ಕೈಗೊಂಡಿರುವ ಎನ್.ಎಸ್. ಭೋಸರಾಜು ಅವರಿಗೆ ಮುಂದಿನ ಅವಧಿಯಲ್ಲೂ ಸಚಿವ ಸ್ಥಾನ ನೀಡಿದರೆ ಇನ್ನಷ್ಟು ಜನಪರ ಹಾಗೂ ಅಭಿವೃದ್ಧಿ ಕಾಮಗಾರಿಗಳು ನಡೆಯಲಿವೆ. ಇದರಿಂದ ಕಾಂಗ್ರೆಸ್ ಪಕ್ಷಕ್ಕೂ ರಾಜಕೀಯವಾಗಿ ಅನುಕೂಲವಾಗಲಿದೆ ಎಂದು ಬಂದೇನವಾಜ್ ಅಭಿಪ್ರಾಯಪಟ್ಟಿದ್ದಾರೆ.

ಆದ್ದರಿಂದ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನೇತೃತ್ವದ ಭವಿಷ್ಯದ ಸಚಿವ ಸಂಪುಟದಲ್ಲಿಯೂ ಎನ್.ಎಸ್. ಭೋಸರಾಜು ಅವರಿಗೆ ಸಚಿವ ಸ್ಥಾನ ನೀಡುವಂತೆ ಸರ್ಕಾರ ಹಾಗೂ ಪಕ್ಷದ ಹೈಕಮಾಂಡ್‌ಗೆ ಮನವಿ ಮಾಡಿರುವುದಾಗಿ ಅವರು ತಿಳಿಸಿದ್ದಾರೆ.

ರಾಯಚೂರಿನ ಸೈಕಲ್ ಸಂಸ್ಥೆಯಿಂದ ವಿಶ್ವ ಸೈಕಲ್ ದಿನಾಚರಣೆ

ರಾಯಚೂರು ನಗರದಲ್ಲಿ ದಿನಾಂಕ 3/ 6/3026ರಂದು ವಿಶ್ವ ಸೈಕಲ್ ದಿನಾಚರಣೆ. ಈ ವಿಶ್ವ ಬೈಸಿಕಲ್ ದಿನಾಚರಣೆಯ ಕಾರ್ಯಕ್ರಮವನ್ನು ರಾಯಚೂರ ಸೈಕಲ್ ಅಸೋಸಿಯೇಷನ್ ಸಮಿತಿ ವತಿಯಿಂದ ಬೆಳಗ್ಗೆ 7:00ಗೆ ಆ ಯೋಜನೆ ಮಾಡಲಾಗಿತ್ತು . ಈ ಸೈಕಲ್ ಮ್ಯಾರಥಾನ್ ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷರಾದ ಡಾಕ್ಟರ್ ಬಸವರಾಜ್ ಎಂ ಪಾಟೀಲ್ ಮಾತನಾಡುತ್ತಾ ಇಂದು ನಮ್ಮ ರಾಯಚೂರ ನಗರದಲ್ಲಿ ವಿಶ್ವ ಬೈಸಿಕಲ್ ದಿನಾಚರಣೆ ಅಂಗವಾಗಿ ಈ ಕಾಯರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ .ಇಂದು ನಾವು ಸೈಕಲ್ ಮ್ಯಾರಥಾನ್ ಕೃಷಿ ವಿಶ್ವವಿದ್ಯಾಲಯದ ಬಸವ ನರ್ಸಿಂಗ್ ಆಸ್ಪತ್ರೆಯಿಂದ ಪ್ರಾರಂಭವಾಗಿ ಬಸಬೀಶ್ವರ ವೃತ್ತದ ಮೂಲಕ ಗಾಂಧಿ ವೃತ್ತ ತೀನ ಕಂದಿಲ್ ಆಲ್ ಇಂಡಿಯಾ ರೇಡಿಯೋ .ಡಾ.ಬಾಬು ಜಗಜೀವನ ರಾಮ್ ವೃತ ಡಾ. ಬಿ ಆರ್ ಅಂಬೇಡ್ಕರ್ ವೃತ್ತದ ಮೂಲಕ ಬಸ್ವೇಶ್ವರ ವೃತ್ತವನ್ನು ಸೇರಿ ಸೈಕಲ್ ಜಾತ ಕಾರ್ಯಕ್ರಮವನ್ನು ಮಾಡಲಾಯಿತು .ನಾವು ನಮ್ಮೆಲ್ಲ ಸ್ನೇಹಿತರ ನಮ್ಮ ಸಂಸ್ಥೆಯ ಪದಾಧಿಕಾರಿಗಳ ಸಂಗಡ ಈ ಕಾರ್ಯಕ್ರಮವನ್ನು ಆಯೋಜನೆ ಮಾಡಲಾಗಿದೆ ಸೈಕಲ್.ಬಳಸುವುದರಿಂದ ಅಥವಾ ಬೆಳಗಿನ ಜಾವ ಇದನ್ನು ತೆಗೆದುಕೊಂಡು ಹೋಗಿ ಅಭ್ಯಾಸ ಮಾಡುವುದರಿಂದ ದೈಹಿಕವಾಗಿ ಮತ್ತು ಮಾನಸಿಕವಾಗಿ ಗಟ್ಟಿಯಾಗುತ್ತೇವೆ ನಮ್ಮ ಸಂಸ್ಥೆಯ ಪದಾಧಿಕಾರಿಗಳು ನೂರಾರು ಕಿಲೋಮೀಟರು ಸೈಕಲ್ ಹೊಡಿವ ಅಭ್ಯಾಸವನ್ನು ರೂಡಿಸಿಕೊಂಡಿದ್ದಾರೆ ಇದು ಉತ್ತಮ ಆರೋಗ್ಯಕ್ಕೆ ಸಹಾಯಕಾರಿಯಾಗುತ್ತದೆ ದಿನನಿತ್ಯ ಬೆಳಗಿನ ಜಾವದಲ್ಲಿ ನಾನು ನನ್ನ ಸ್ನೇಹಿತರು ದಿನಾಲು ಹತ್ತಿಪ್ಪತ್ತು ಕಿಲೋಮೀಟರು ಸೈಕಲ್ ಮೂಲಕ ದೈಹಿಕ ವ್ಯಾಯಾಮನ ಮಾಡುತ್ತೇವೆ ಇಂದು ನಮ್ಮ ಕರಿಯ ಮೇರಿಗೆ ಬಂದ ಎಲ್ಲ ನಮ್ಮ ಸ್ನೇಹಿತರಿಗೆ ವಂದನೆಗಳನ್ನು ತಿಳಿಸುತ್ತೇನೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದ. ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಶಿಕ್ಷಣ ವಿಭಾಗದ ವಿಭಾಗದ ಜಿಲ್ಲಾ ಸಂಚಾಲಕರಾದ ಡಾ. 2018ರಿಂದ ವಿಶ್ವಸಂಸ್ಥೆಯು ಪ್ರತಿವರ್ಷ ಜೂನ್ ಮೂರರಂದು ವಿಶ್ವ ಬೈಸಿಕಲ್ ದಿನಾಚರಣೆ ಎಂದು ಆಚರಣೆ ಮಾಡಲಾಗುತ್ತದೆ .ಸೈಕಲ್ ಪರಿಸರಸ್ನೇಹಿ ಸಾರಿಗೆ ಸಾಧನವಾಗಿದೆ .ಇದನ್ನು ಬಳಕೆ ಮಾಡುವುದರ ಮೂಲಕ ವ್ಯಕ್ತಿ ದೈಹಿಕವಾಗಿ ಗಟ್ಟಿಯಾಗುತಾನೆ. ಉತ್ತಮ ಪರಿಸರ ನಿರ್ಮಾಣ ಮಾಡ್ಲಿಕ್ಕೆ ಸಹಕಾರಿಯಾಗುತ್ತದೆ .ಆರ್ಥಿಕ ಉಳಿತಾಯಕ್ಕೆ ಮತ್ತು ತೂಕಲ್ಲಿಸಲು ಇದು ತುಂಬಾ ಸಹಾಯಕಾರಿಯಾಗಿದೆ. ಸೈಕಲ್ ಕೆಲವರು ವ್ಯಾಯಾಮಕ್ಕಾಗಿ ಕೆಲವರು ವ್ಯಾಪಾರಕ್ಕಾಗಿ .ಕೆಲವರು ಶಾಲಾ-ಕಾಲೇಜಿಗೆ ಹೋಗಲು. ಕೆಲವರು ತಮ್ಮ ದಿನ ನಿತ್ಯ ಜೀವನದ ಆರಂಭವನ್ನು ಸೈಕಲ್ ಮೂಲಕ ಮಾಡುತ್ತಾರೆ. ಸೈಕಲ್ ಬಡವರ ಪ್ಲೇನ್ ಎಂದರೆ ತಪ್ಪಾಗಲಾರದು ಎಂದು .ಡಾ. ಬಿರಾದಾರ ಹೇಳಿದರು. ಈ ಸಂದರ್ಭದಲ್ಲಿ. ಡಾ ಜಯಪ್ರಕಾಶ್ ಬೆಟ್ಟದೂರು .ಡಾ. ಸಕಲೇಶ ಬೆಟ್ಟದೂರು. ಡಾ. ಸುನೀಲ. ಡಾ. ಶರಣಗೌಡ .ಸಂದೀಪ್ ಕಲ್ಲೂರ್ .ಸೋಮನಾಥ ರೆಡ್ಡಿ .ಚನ್ನಬಸವ ಕಾರ್ತಿಕ್ .ವಿಜಯ್ .ಸುರೇಶ್. ವೀರೇಂದ್ರ ರಾಮಪುರ ..ಗುರು ಚಿತ್ರ ವೀರೇಶ ಎನ ಸೇರಿದಂತೆ ರಾಯಚೂರ ಸೈಕಲ್ ಅಸೋಸಿಯೇಷನ್ ನ ಪದಾಧಿಕಾರಿಗಳು ಮತ್ತು ಸದಸ್ಯರು ಉಪಸ್ಥಿತರಿದ್ದರು.





ಹೆಲ್ಮೆಟ್ ಧರಿಸದ ದ್ವಿಚಕ್ರ ವಾಹನ ಸವಾರರಿಗೆ ದಂಡ

ಸಿರುಗುಪ್ಪ- ರಸ್ತೆ ಅಪಘಾತಗಳಿಂದ ಜೀವ ಹಾನಿ ತಡೆಗಟ್ಟುವ ಉದ್ದೇಶದಿಂದ ಹೆಲ್ಮೆಟ್ ಧಾರಣೆ ಕಡ್ಡಾಯಗೊಳಿಸಿರುವ ಪೊಲೀಸ್ ಇಲಾಖೆ ಸೋಮವಾರದಿಂದ ಕಟ್ಟುನಿಟ್ಟಿನ ಜಾರಿಗೆ ಮುಂದಾಗಿದ್ದು ಹೆಲ್ಮೆಟ್ ಇಲ್ಲದೆ ಸಂಚರಿಸುತ್ತಿದ್ದ ದ್ವಿಚಕ್ರ ವಾಹನ ಸವಾರರನ್ನು ತಡೆದು ದಂಡ ವಿಧಿಸುವ ಕಾರ್ಯದಲ್ಲಿ ಮಂಗಳವಾರವೂ ತೊಡಗಿದ್ದು ಹೆಲ್ಮೆಟ್ ಧರಿಸದ ದ್ವಿಚಕ್ರ ವಾಹನ ಸವಾರರು ದಂಡ ಕಟ್ಟಿದರು ಇದರ ಭಾಗವಾಗಿ ನಗರದ ಪ್ರಮುಖ ವೃತ್ತಗಳಲ್ಲಿ ವಿಶೇಷ ತಪಾಸಣಾ ಕಾರ್ಯಾಚರಣೆ ನಡೆಸಿದ ಪೊಲೀಸರು ಹೆಲ್ಮೆಟ್ ಇಲ್ಲದೇ ಸಂಚರಿಸುತ್ತಿದ್ದ ದ್ವಿಚಕ್ರ ವಾಹನ ಸವಾರರಿಗೆ ದಂಡ ವಿಧಿಸಿದರು ತಪಾಸಣೆ ವೇಳೆ ಹೆಲ್ಮೆಟ್ ಧರಿಸದೇ ಬಂದ ವಾಹನ ಸವಾರರನ್ನು ತಡೆದು ಪರಿಶೀಲನೆ ನಡೆಸಲಾಯಿತು ದಂಡ ವಿಧಿಸಿ ವಾಹನಗಳನ್ನು ಬಿಡುಗಡೆ ಮಾಡಲಾಯಿತು ಪೊಲೀಸ್ ಇಲಾಖೆ ಕಳೆದ ಒಂದು ತಿಂಗಳಿನಿಂದ ನಗರದ ವಿವಿಧ ಭಾಗಗಳಲ್ಲಿ ಜಾಗೃತಿ ಅಭಿಯಾನ ನಡೆಸಿ ಹೆಲ್ಮೆಟ್ ಧರಿಸುವ ಮಹತ್ವದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಿತ್ತು ಶಾಲಾ ಕಾಲೇಜುಗಳು ಸಾರ್ವಜನಿಕ ಸ್ಥಳಗಳಲ್ಲಿ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿತ್ತು ಜಾಗೃತಿ ಮೂಡಿಸಿದ ಬಳಿಕವೂ ಅನೇಕರು ನಿಯಮ ಪಾಲಿಸದಿರುವುದು ಕಂಡುಬಂತು ಸೋಮವಾರ ಒಟ್ಟು 38 ಪ್ರಕರಣಗಳು ದಾಖಲಾಗಿದೆ .



ಮಸ್ಕಿ ಕೃಷಿ ಉನ್ನತ ಮಾರುಕಟ್ಟೆ ಅಭಿವೃದ್ಧಿಗೆ ಐದು ಕೋಟಿ ರೂಪಾಯಿ ಅನುದಾನ ಬಿಡುಗಡೆ ಸಿದ್ದನಗೌಡ ಮಾಟೂರ್

ಮಸ್ಕಿ,ಜೂ.03-

ಕೃಷಿ ಉನ್ನತ ಮಾರುಕಟ್ಟೆ ಸಮಿತಿ ಎಪಿಎಂಸಿ ಸಮಗ್ರ ಅಭಿವೃದ್ಧಿಗಾಗಿ ರಾಜ್ಯ ಸರಕಾರ ಐದು ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡಿದೆ ಎಂದು ಪತ್ರಿಕಾ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಮಸ್ಕಿ ಕೃಷಿ ಮಾರುಕಟ್ಟೆ ಆದ ಬಳಿಕ ಕೃಷಿ ಸಚಿವ ಶಿವಾನಂದ ಪಾಟೀಲ್ ಭೇಟಿಯಾದ ವೇಳೆ

ಎಪಿಎಂಸಿ ಸಮಿತಿ ಹಾಗೂ ಮಸ್ಕಿ ಶಾಸಕ ಆರ್ ಬಸನಗೌಡ ತುರುವಿಹಾಳ ಅವರ ಮನವಿಗೆ ಸ್ಪಂದಿಸಿ.

ಅನುದಾನ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.

ಬಿಡುಗಡೆಯಾದ ಅನುದಾನವನ್ನು ಮಾರುಕಟ್ಟೆಯ ಮೂಲ ಸೌಕರ್ಯಕ್ಕಾಗಿ. ಅಭಿವೃದ್ಧಿಗಾಗಿ ಬಳಸಲಾಗಲಾಗುವುದು ರೈತರು ವ್ಯಾಪಾರಿಗಳು ಹಾಗೂ ಸಾರ್ವಜನಿಕರ ಅನುಕೂಲಕ್ಕಾಗಿ ಕುಡಿಯುವ ನೀರಿನ ವ್ಯವಸ್ಥೆ. ರೈತರ ಭವನ. ಸುತ್ತು ಗೋಡೆ. ಮಳಿಗೆಗಳ ನಿರ್ಮಾಣ. ಹೈಟೆಕ್ ಶೌಚಾಲಯ. ಮಹದ್ವಾರ. ಸೇರಿದಂತೆ ವಿವಿಧ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಸ್ಕಿ ಶಾಸಕ ಬಸವನಗೌಡ ತುರುವಿಹಾಳ್ ಅವರಿಗೆ ಸಂಪುಟದಲ್ಲಿ ಸಚಿವ ಸ್ಥಾನ ನೀಡಬೇಕೆಂದು ಮನವಿ ಮಾಡಿದರು.

ಹಾಗೆ ಮಸ್ಕಿ ಕ್ಷೇತ್ರದಲ್ಲಿ ಕಾಂಗ್ರೆಸ್ ಪಕ್ಷವನ್ನು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಮಲ್ಲಿಕಾರ್ಜುನ್ ಪಾಟೀಲ್ ಯದ್ದಲ್ಲದಿನ್ನಿ ಅವರಿಗೆ ವಿಧಾನ ಪರಿಷತ್ತಿನಲ್ಲಿ ಸ್ಥಾನಮಾನ ನೀಡಬೇಕೆಂದು ಮನವಿ ಮಾಡಿದರು.

ಆಪತ್ತು ಕಾಲಕ್ಕೆ ಆಪತ್ಬಾಂದವರಾಗಲೂ ಧರ್ಮಸ್ಥಳ ಸಂಸ್ಥೆಯಿಂದ ತುರ್ತು ಸ್ಪಂದನಾ ತಂಡ ರಚನೆ



ಅಫಜಲಪುರ:ರಾಜ್ಯದಲ್ಲಿ ತಮ್ಮದೇ ಆದ ಧಾರ್ಮಿಕ ಹಾಗೂ ಸಾಮಾಜಿಕ ಬದ್ದತಿಯ ಮೆರೆಗೆ ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಮಾಡುತ್ತ ರಾಷ್ಟ್ರದಲ್ಲಿ ಸದ್ದು ಮಾಡುತ್ತಿರುವ ಧರ್ಮಸ್ಥಳ ಸಂಸ್ಥೆ ಇಂದು ಮಳೆಗಾಲದಲ್ಲಿ ಆಗುವ ಅನಾಹುತಗಳು ಹಾಗೂ ಪ್ರಕೃತಿ ವಿಕೋಪಗಳಿಗೆ ತೊಂದರೆಗಿಡಾಗುವ ಜನರಿಗಾಗಿ ತುರ್ತು ಸ್ಪಂದನಾ ತಂಡ ರಚನೆ ಮಾಡಿ ಅಧಿಕೃತವಾಗಿ ಇಂದು ಚಾಲನೆ ನೀಡಲಾಯಿತು.

ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದ ಧರ್ಮಸ್ಥಳ ಯೋಜನೆಯ ಯೋಜನಾಧಿಕಾರಿ ಮಹಾಂತೇಶ 'ಕಳೆದ ಮೂರು ವರ್ಷಗಳಿಂದ ತಾಲ್ಲೂಕಿನ ಅಗ್ನಿಶಾಮಕ ದಳ, ಪೊಲೀಸ್ ಇಲಾಖೆ ಹಾಗೂ ಪರಿಣಿತರಿಂದ ತರಬೇತಿ ಪಡೆದಿರುವ ತಂಡದ ಸದಸ್ಯರು ವಿಪತ್ತು ನಿರ್ವಹಣೆ ಮತ್ತು ಸಾಮಾಜಿಕ ಸೇವಾ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ತೊಡಗಿಸಿಕೊಂಡಿದ್ದಾರೆ. ಇದೇ ಅನುಭವದ ಆಧಾರದ ಮೇಲೆ ಈ ವರ್ಷ ಮಳೆಗಾಲದ ತುರ್ತು ನೆರವಿಗೆ ರಚಿಸಲಾದ ಧರ್ಮಸ್ಥಳದ ತುರ್ತು ಸ್ಪಂದನಾ ತಂಡದ ಸದಸ್ಯರು ತುರ್ತು ನೆರವು ಒದಗಿಸಲು ಪ್ರತ್ಯೇಕ ಸ್ಪಂದನಾ ತಂಡವನ್ನು ರೂಪಿಸಲಾಗಿದೆ.ತಾಲೂಕಿನ ಯಾವುದೇ ಹಳ್ಳಿಗಳಲ್ಲಿ ಮಳೆಗಾಲದ ಮಳೆಗೆ ತೊಂದರೆಗಿಡಾದ ಜನರಿಗೆ ತುರ್ತು ಸೇವೆ ಒದಗಿಸಲು ನಮ್ಮ ತಂಡ ಸದಾ ಸಿದ್ದವಾಗಿರುತ್ತದೆ ಎಂದರು.

ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಮುಖ್ಯ ಕಾರ್ಯನಿರ್ವ-ಹಣಾಧಿಕಾರಿ ಅನಿಲಕುಮಾರ್ ಎಸ್. ಎಸ್ ಹಾಗೂ ಜನಜಾಗೃತಿ ಪ್ರಾದೇಶಿಕ ನಿರ್ದೇಶಕ ವಿವೇಕ್ ವಿ.ಪಾಯ್ಸ್ ಅವರ ಮಾರ್ಗದರ್ಶನದಲ್ಲಿ ತಂಡವನ್ನು ರಚಿಸಲಾಗಿದೆ. ಅಫಜಲಪುರ ತಾಲ್ಲೂಕಿನ ತುರ್ತು ಸ್ಪಂದನಾ ತಂಡದ ನಾಯಕರಾಗಿ ಸುನೀಲ್ ಮತ್ತು ದಿಗಂಬರ್ ಅವರನ್ನು ಆಯ್ಕೆ ಮಾಡಲಾಗಿದೆ ಎಂದರು.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಮಾರ್ಗದರ್ಶನದ ಲ್ಲಿ ಪೊಲೀಸ್ ಇಲಾಖೆ, ಅಗ್ನಿಶಾಮಕ ದಳ, ಅರಣ್ಯ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳ ಸಹಯೋಗದೊಂದಿಗೆ ತಂಡ ಕಾರ್ಯ-ನಿರ್ವಹಿಸಲಿದೆ. ಇದರೊಂದಿಗೆ ಅಫಜಲಪುರ ವಿಪತ್ತು ನಿರ್ವಹಣಾ ಸಮಿತಿಯ ಕೋರ್ ಕಮಿಟಿ ಸಭೆ ನಡೆಸಿ ಮಳೆಗಾಲದ ಸಿದ್ದತೆ, ಅಪಾಯ ಪ್ರದೇಶಗಳ ಗುರುತು ಹಾಗೂ ತುರ್ತು ಸ್ಪಂದನೆ ಕುರಿತಂತೆ ಸಮಗ್ರ ವಿಮರ್ಶೆ ನಡೆಸಲಾಯಿತು.

ವಿಪತ್ತು ನಿರ್ವಹಣಾ ಕಾರ್ಯಕ್ರಮದ ಯೋಜನಾಧಿಕಾರಿ ಜೈವಂತ ಪಟಗಾರ, ತಾಲ್ಲೂಕು ಯೋಜನಾಧಿಕಾರಿ ಮಹಾಂತೇಶ್, ಜನಜಾಗೃತಿ ಪ್ರಾದೇಶಿಕ ಮೇಲ್ವಿಚಾರಕ ಮಲ್ಲೇಶ್, ಶೌರ್ಯ ಸಮಿತಿಯ ಮಾಸ್ಟರ್ ಮತ್ತು ಕ್ಯಾಪ್ಟನ್‌ಗಳು ಇದ್ದರು.



ಶ್ರಮಿಕರಿಗೆ ಆಸರೆಯಾದ ಕೆಪಿಸಿಸಿ ರಾಜ್ಯ ಮಹಿಳಾ ಕಾರ್ಯದರ್ಶಿ ಡಾ. ಅನಸೂಯಾ ಸುಲೇಕಾರ ಅವರ ಹುಟ್ಟು ಹಬ್ಬ

ಅಫಜಲಪುರ: ಕೆಪಿಸಿಸಿ ರಾಜ್ಯ ಮಹಿಳಾ ಕಾರ್ಯದರ್ಶಿಗಳಾದ ಡಾ.ಅನಸೂಯಾ ಸುಲೇಕಾರ ಅವರ ಹುಟ್ಟು ಹಬ್ಬದ ನಿಮಿತ್ಯ ಬಸ್ ಡಿಪೋ ಮೆಕ್ಯಾನಿಕ್ ಕೆಲಸಗಾರರಿಗೆ ಹಾಗೂ ರೋಗಿಗಳಿಗೆ ಚಿಕಿತ್ಸೆ ನೀಡುವ ನರ್ಸ್9ಗಳಿಗೆ ಮತ್ತು ವೈದ್ಯರಿಗೆ ಸೇರಿದಂತೆ ಮಠಾಧಿಶರಿಗೆ ಹಣ್ಣು ಹಂಪಲು ನೀಡಿ ಸಂಭ್ರಮಾಚರಣೆ ಮಾಡಲಾಯಿತು.

ಹುಟ್ಟು ಹಬ್ಬ ಮಾಡಿಕೊಳ್ಳುವ ನೆಪದಲ್ಲಿ ಸಾರ್ವಜನಿಕ ವಲಯದಲ್ಲಿ ಕಾರ್ಯನಿರ್ವಹಿಸುವ ಕಾರ್ಮಿಕ ವರ್ಗದವರಿಗೆ ಹಾಗೂ ಆರೋಗ್ಯ ಸೇವೆ ಒದಗಿಸುವ ಮಿತ್ರರಿಗೆ ಹಣ್ಣುಗಳನ್ನು ವಿತರಣೆ ಮಾಡಿ ಸಾಮಾಜಿಕ ಬದ್ಧತೆ ಮೆರೆದ ಅನಸೂಯಾ ಸುಲೇಕಾರ ಅವರ ಹುಟ್ಟು ಹಬ್ಬದ ನಿಮಿತ್ಯ ಅವರ ಆತ್ಮೀಯ ಅಭಿಮಾನಿ ಬಳಗದಿಂದ ಸರಳ ಮತ್ತು ಅರ್ಥಪೂರ್ಣವಾಗಿ ಆಚರಣೆ ಮಾಡಲಾಯಿತು. ಆಡಂಬರದ ಹುಟ್ಟು ಹಬ್ಬ ಮಾಡಿಕೊಳ್ಳುವ ಜನರ ಮಧ್ಯೆ ಬಡವರಿಗಾಗಿ ಮಿಡಿಯುವ ಅನಸೂಯಾ ಸುಲೇಕಾರ ಅವರ ಜನ್ಮದಿನ ಸಾರ್ಥಕತೆ ಮೆರೆದರು ಎಂದರೆ ತಪ್ಪಾಗಲಾರದು.

ಸುದ್ದಿಗಾರರೊಂದಿಗೆ ಮಾತನಾಡಿದ ಸುಲೇಕಾರ ಅವರ ಅಭಿಮಾನಿ ಬಳಗ ರಾಜ್ಯ ರಾಜಕಾರಣದಲ್ಲಿ ಹೆಸರು ಮಾಡುತ್ತಿರುವ ನಮ್ಮ ತಾಲೂಕಿನ ಮನೆ ಮಗಳು ಡಾ.ಅನಸೂಯಾ ಸುಲೇಕಾರ ಅವರ ಹುಟ್ಟು ಹಬ್ಬವನ್ನು ದುಂದು ವೆಚ್ಚಗಳನ್ನು ಮಾಡಬೇಡಿ ಎನ್ನುವ ಸಲಹೆ ನೀಡುತ್ತಾ ಎಲ್ಲರೊಂದಿಗೆ ಬೆರೆತು ಸಂಭ್ರಮಿಸುವ ಖುಷಿ ವ್ಯಕ್ತಪಡಿಸಿದ್ದಾರೆ.ಆಡಂಭರದ ಆಚರಣೆಗೆ ಬ್ರೇಕ್ ಹಾಕಿ ಸರಳ ಮತ್ತು ಸಾರ್ವಜನಿಕರಿಗಾಗಿ ಹಗಲಿರುಳು ಶ್ರಮಿಸುವ ಶ್ರಮಿಕ ವರ್ಗದವರಿಗೆ ತನ್ನ ಹುಟ್ಟು ಹಬ್ಬ ಅಲ್ಪಸಂತೋಷ ನೀಡಲಿ ಎನ್ನುವ ಆಶಯ ಅವರದ್ದಾಗಿದೆ.ಮುಂದಿನ ದಿನಗಳಲ್ಲಿ ಅವರ ರಾಜಕೀಯ ಭವಿಷ್ಯ ಇನ್ನೂ ಎತ್ತರದ ಮಟ್ಟಕ್ಕೆ ಹೋಗಲಿ ಅವರು ಕಂಡ ಕನಸುಗಲಕು ನನಸಾಗಲಿ ಎಂದು ಹಾರೈಸಿದರು.ಇದೆ ಸಂದರ್ಭದಲ್ಲಿ,ಬೈಲಪ್ಪ ಗೌರ,ಶೇಖರ ನಂದರಗಿ,ಸೌಮ್ಯ ಪಟ್ನೆ,ಪ್ರಯಾಂಕಾ ,ರೂಪಾ ಅಂದೊಡಗಿ,ದತ್ತು ಪೂಜಾರಿ,ಸಲೀಮ ಶೇಕ್,ಶಿವಾನಂದ ಟೊಣ್ಣೆ,ಸೇರಿದಂತೆ ಹಲವರು ಉಪಸ್ಥಿತರಿದ್ದರು.

ದೆಹಲಿಯ ರೆಸ್ಟೋರೆಂಟ್‌ನಲ್ಲಿ ಭಾರಿ ಅಗ್ನಿ ಅನಾಹುತ: ವಿದೇಶಿಗರೂ ಸೇರಿ 21 ಮಂದಿ ಸಾವು, ಪ್ರಧಾನಿ ಮೋದಿ ಸಂತಾಪ

ನವದೆಹಲಿ: ದಕ್ಷಿಣ ದೆಹಲಿಯ ಮಾಲ್ವಿಯಾ ನಗರದ ರೆಸ್ಟೋರೆಂಟ್‌ವೊಂದರಲ್ಲಿ ಭಾರೀ ಅಗ್ನಿ ಅವಘಡ ಸಂಭವಿಸಿದ್ದು, 21 ಮಂದಿ ಸಾವನ್ನಪ್ಪಿದ್ದಾರೆ.

ಸಾವಿಗೀಡಾದವರಲ್ಲಿ ಹೆಚ್ಚಿನವರು ವಿದೇಶಿ ಪ್ರಜೆಗಳು ಎಂದು ದೆಹಲಿ ಪೊಲೀಸರು ಮಾಹಿತಿ ನೀಡಿದ್ದಾರೆ.

ದೆಹಲಿ ದಕ್ಷಿಣ ವಿಭಾಗದ ಡಿಸಿಪಿ ಅನಂತ್ ಮಿತ್ತಲ್ ಅವರು ಪ್ರತಿಕ್ರಿಯಿಸಿ, ಬೆಳಿಗ್ಗೆ 8:48ಕ್ಕೆ ಮಾಲ್ವಿಯಾ ನಗರದ ಫ್ಲೋರಿಶ್ ಸ್ಟೇ ಬಿಬಿಯಲ್ಲಿ ಬೆಂಕಿ ಕಾಣಿಸಿಕೊಂಡ ಬಗ್ಗೆ ನಮಗೆ ಮಾಹಿತಿ ಬಂತು. ಸ್ಥಳೀಯ ಪೊಲೀಸರು ತಕ್ಷಣವೇ ಸ್ಥಳ ತಲುಪಿ ರಕ್ಷಣಾ, ಸ್ಥಳಾಂತರ ಪ್ರಕ್ರಿಯೆ ಮತ್ತು ಪರಿಹಾರ ಕಾರ್ಯಾಚರಣೆ ಶುರು ಮಾಡಿದರು. 8 ಅಗ್ನಿಶಾಮಕ ದಳದವರ ಸಹಾಯದಿಂದ ಬೆಂಕಿಯನ್ನು ಯಶಸ್ವಿಯಾಗಿ ನಂದಿಸಲಾಯಿತು. ಪೊಲೀಸರು, ಅಗ್ನಿಶಾಮಕ ಸೇವೆಗಳು ಮತ್ತು ಇತರ ತುರ್ತು ಪ್ರತಿಕ್ರಿಯೆ ತಂಡಗಳ ಸಂಘಟಿತ ಪ್ರಯತ್ನಗಳಿಂದ 40ಕ್ಕೂ ಹೆಚ್ಚು ಜನರನ್ನು ರಕ್ಷಿಸಿ ಚಿಕಿತ್ಸೆ ಗಾಗಿ ಹತ್ತಿರದ ಆಸ್ಪತ್ರೆಗಳಿಗೆ ಸೇರಿಸಲಾಗಿದೆ. ಈ ದುರಂತದಲ್ಲಿ 21 ಜನರು ಸಾವನ್ನಪ್ಪಿದ್ದಾರೆ. ರಕ್ಷಣಾ ಮತ್ತು ಶೋಧ ಕಾರ್ಯಾಚರಣೆಗಳು ಇನ್ನೂ ನಡೆಯುತ್ತಿವೆ. ಸಂತ್ರಸ್ತರಿಗೆ ಸಾಧ್ಯವಿರುವ ಎಲ್ಲ ಸಹಾಯ ಎಲ್ಲಾ ಸಂಬಂಧಿತ ಸಂಸ್ಥೆಗಳು ಸ್ಥಳದಲ್ಲಿ ಒದಗಿಸುತ್ತಿವೆ ಎಂದು ತಿಳಿಸಿದರು.

ಸ್ಥಳೀಯ ಬಿಜೆಪಿ ಶಾಸಕ ಸತೀಶ್ ಉಪಾಧ್ಯಾಯ ಅವರು ಪ್ರತಿಕ್ರಿಯಿಸಿ, ಬೆಂಕಿ ಅನಾಹುತ ಹೇಗೆ ಸಂಭವಿಸಿತು ಎಂಬುದು ತನಿಖೆಯ ವಿಷಯ. ಇದು ತುಂಬಾ ದುಃಖಕರ ಘಟನೆ. ಸರ್ಕಾರಿ ಸಂಸ್ಥೆಗಳು ಶೋಧ ಮತ್ತು ರಕ್ಷಣಾ ಕಾರ್ಯಾಚರಣೆಯಲ್ಲಿ ತೊಡಗಿವೆ. ರಕ್ಷಣಾ ತಂಡಗಳು ತಕ್ಷಣವೇ ಪ್ರತಿಕ್ರಿಯಿಸದೇ ಇರುತ್ತಿದ್ದರೆ ಪರಿಸ್ಥಿತಿ ಮತ್ತಷ್ಟು ಬಿಗಡಾಯಿಸುತ್ತಿತ್ತು. ಬಾಂಗ್ಲಾದೇಶ ಮತ್ತು ಇತರೆ ಸಾರ್ಕ್ ದೇಶಗಳ ಜನರು ವೈದ್ಯಕೀಯ ಚಿಕಿತ್ಸೆ ಗಾಗಿ ಬಂದು ಇಲ್ಲಿ ಉಳಿದುಕೊಂಡಿದ್ದರು ಎಂದು ಮಾಹಿತಿ ನೀಡಿದರು.

ಪ್ರಧಾನಿ ಸಂತಾಪ, ಪರಿಹಾರ ಘೋಷಣೆ: ಮಾಳವೀಯ ನಗರ ಅಗ್ನಿ ಅವಘಡದಲ್ಲಿ ಮೃತಪಟ್ಟವರಿಗೆ ಪ್ರಧಾನಿ ಮೋದಿ ಸಂತಾಪ ಸೂಚಿಸಿದ್ದಾರೆ. ಮೃತರ ಸಂಬಂಧಿಕರಿಗೆ ತಲಾ 2 ಲಕ್ಷ ರೂಪಾಯಿ ಮತ್ತು ಗಾಯಾಳುಗಳಿಗೆ 50,000 ರೂಪಾಯಿ ಪರಿಹಾರ ಘೋಷಿಸಿದ್ದಾರೆ.

ಡಿಸ್ಕಲೈಮರ್:-ಈ ಪತ್ರಿಕೆಯಲ್ಲಿ ಪ್ರಕಟವಾಗುವ ಸುದ್ದಿ, ಅಭಿಪ್ರಾಯಗಳು, ಚಿತ್ರಗಳು ಹಾಗೂ ಮಾಹಿತಿಗಳು ವಿಶ್ವಾಸಾರ್ಹ ಮೂಲಗಳ ಆಧಾರದ ಮೇಲೆ ಸಾರ್ವಜನಿಕ ಹಿತಾಸಕ್ತಿ ಮತ್ತು ಜಾಗೃತಿಗಾಗಿ ಮಾತ್ರ ಪ್ರಕಟಿಸಲ್ಪಟ್ಟಿವೆ. ಯಾವುದೇ ವ್ಯಕ್ತಿ, ಸಂಸ್ಥೆ ಅಥವಾ ಸಮುದಾಯವನ್ನು ಅವಹೇಳನಗೊಳಿಸುವ, ಅವಮಾನ ಮಾಡುವ ಅಥವಾ ಖಾಸಗಿ ಹಕ್ಕಿಗೆ ಧಕ್ಕೆ ತರುವ ಉದ್ದೇಶ ಇಲ್ಲ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ಮುಂಗಾರು ಕಾಲಿಡುವ ಮುನ್ನವೇ ಮಂಗಳೂರಿನಲ್ಲಿ ತಂಪೆರೆದ ಮಳೆರಾಯ

ಮಂಗಳೂರು: ಕರಾವಳಿಗೆ ಮುಂಗಾರು ಪ್ರವೇಶಿಸುವ ಮುನ್ನವೇ ಮಳೆರಾಯ ತನ್ನ ಆಗಮನದ ಸೂಚನೆ ನೀಡಿದ್ದಾನೆ. ಮಂಗಳವಾರ ರಾತ್ರಿ ಆರಂಭವಾದ ಸಾಧಾರಣ ಮಳೆ ಬುಧವಾರ ಬೆಳಗ್ಗೆಯೂ ಮುಂದುವರೆದಿದ್ದು, ಹಲವು ದಿನಗಳಿಂದ ಬಿಸಿಲಿನ ಬೇಗೆಯಿಂದ ಬಸವಳಿದಿದ್ದ ಜನರಿಗೆ ನೆಮ್ಮದಿ ತಂದಿದೆ.

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯಂತೆ ಜೂನ್ 4ರಂದು ಕೇರಳಕ್ಕೆ ಮುಂಗಾರು ಪ್ರವೇಶಿಸುವ ಸಾಧ್ಯತೆ ಇದೆ. ಸಾಮಾನ್ಯವಾಗಿ ಕೇರಳ ಪ್ರವೇಶದ ಒಂದು ದಿನದ ಬಳಿಕ ದಕ್ಷಿಣ ಕನ್ನಡ ಜಿಲ್ಲೆಗೂ ಮುಂಗಾರು ತಲುಪುತ್ತದೆ. ಆದರೆ, ಈ ಬಾರಿ ಅಧಿಕೃತ ಮುಂಗಾರು ಆರಂಭಕ್ಕೂ ಮುನ್ನವೇ ಕರಾವಳಿಯಲ್ಲಿ ಮಳೆಯ ವಾತಾವರಣ ನಿರ್ಮಾಣವಾಗಿರುವುದು ವಿಶೇಷವಾಗಿದೆ.

ಮಂಗಳವಾರ ತಡರಾತ್ರಿಯಿಂದಲೇ ಮಂಗಳೂರು ನಗರ ಸೇರಿದಂತೆ ಜಿಲ್ಲೆಯ ಹಲವೆಡೆ ಸಾಧಾರಣ ಮಳೆ ಸುರಿಯತೊಡಗಿದೆ. ಬುಧವಾರ ಬೆಳಗ್ಗೆಯೂ ಮೋಡ ಕವಿದ ವಾತಾವರಣದ ನಡುವೆ ಮಳೆ ಮುಂದುವರೆದಿದೆ. ಮಳೆಯ ಪರಿಣಾಮ ಉಷ್ಣಾಂಶದಲ್ಲಿ ಇಳಿಕೆಯಾಗಿದ್ದು, ಕಳೆದ ಕೆಲವು ವಾರಗಳಿಂದ ಕಾಡುತ್ತಿದ್ದ ಬಿಸಿಲಿನ ತಾಪಕ್ಕೆ ಕೊಂಚ ವಿರಾಮ ದೊರೆತಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR